ಕನ್ನಡ ದಿನಪತ್ರಿಕೆ
11 ಫೆಬ್ರುವರಿ । ರವಿವಾರ
11 February 2024

ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹ 4 | ಸಂಪುಟ – 4 ಸಂಚಿಕೆ – 313 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

ಶಾಸಕ ಭರತ್ ರೆಡ್ಡಿಗೆ ಇಡಿ ಶಾಕ್; ಬಳ್ಳಾರಿ, ಬೆಂಗಳೂರಲ್ಲಿ ದಾಳಿ

ಬೆಂಗಳೂರು: ಅಕ್ರಮ ಹಣ ವರ್ಗಾವಣೆ ಆರೋಪ ಕೇಳಿ ಬಂದ ಹಿನ್ನೆಲೆಯಲ್ಲಿ ಬಳ್ಳಾರಿ ನಗರದ ಶಾಸಕ ಭರತ್ ರೆಡ್ಡಿ ಮನೆ, ಕಚೇರಿ ಹಾಗೂ ಕುಟುಂಬ ಸದಸ್ಯರ ಮನೆ ಸೇರಿ ಒಟ್ಟು 13 ಕಡೆ ಜಾರಿ ನಿರ್ದೇಶನಾಲಯ ದಾಳಿ ನಡೆಸಿದೆ.

ಬೆಂಗಳೂರಿನಿಂದ ಬಂದ ಅಧಿಕಾರಿಗಳು ಭರತ್ ರೆಡ್ಡಿ, ಬುಡಾ ಮಾಜಿ ಅಧ್ಯಕ್ಷ ಎನ್. ಪ್ರತಾಪ್ ರೆಡ್ಡಿ ಮನೆ ಮತ್ತು ಕಚೇರಿಗಳ ಮೇಲೆ ದಾಳಿ ನಡೆಸಿದೆ. ಅಧಿಕಾರಿಗಳು ಏಕ ಕಾಲಕ್ಕೆ ಮನೆ ಹಾಗೂ ಕಚೇರಿಯ ಮೇಲೆ ದಾಳಿ ಮಾಡಿ ದಾಖಲೆ ಪರಿಶೀಲನೆ ನಡೆಸುತ್ತಿದ್ದಾರೆ.

ಶಾಸಕರ ತಂದೆ ಸೂರ್ಯ ನಾರಾಯಣ ರೆಡ್ಡಿ, ಶಾಸಕರ ಚಿಕ್ಕಪ್ಪ ಪ್ರತಾಪ್ ರೆಡ್ಡಿ, ಸಂಬಂಧಿ ಸತೀಶ್ ರೆಡ್ಡಿ ಅವರ ಮನೆ ಕಚೇರಿ ಮೇಲೆ ದಾಳಿ ನಡೆಸಿದೆ. ಭರತ್ ರೆಡ್ಡಿ ಕುಟುಂಬ ಗ್ರಾನೈಟ್ ಬಿಸಿನೆಸ್ ಹೊಂದಿದ್ದು ಬಳ್ಳಾರಿ, ಬೆಂಗಳೂರು, ಚೆನ್ನೈ ಸೇರಿದಂತೆ ಒಟ್ಟು 13 ಕಡೆಯಲ್ಲಿ ದಾಳಿ ನಡೆದಿದೆ.

ಸಿಆರ್‌ಪಿಎಫ್ ಭದ್ರತೆಯಲ್ಲಿ ದಾಳಿ ನಡೆದಿದೆ. ಸದ್ಯ ಬಳ್ಳಾರಿಯ ಗಾಂಧಿನಗರದ ರಾಘವೇಂದ್ರ ಎಂಟರ್‌ಪ್ರೈಸಸ್ ಕಚೇರಿಯಲ್ಲಿ ಹೆಚ್ಚಿನ ಸಂಖ್ಯೆಯ ಅಧಿಕಾರಿಗಳಿದ್ದು ದಾಖಲೆ ಪರಿಶೀಲಿಸುತ್ತಿದ್ದಾರೆ.

ಕಾಂಗ್ರೆಸ್ ಶಾಸಕಿಗೆ ಮನವಿ ಸಲ್ಲಿಸಿದ ಗ್ರಾಮೀಣ ಮಂಡಲ ಬಿಜೆಪಿ ಕಾರ್ಯಕರ್ತರು

ಬೆಳಗಾವಿ: ಬೆಳಗಾವಿ ಗ್ರಾಮೀಣ ಕ್ಷೇತ್ರದಲ್ಲಿ ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿಲ್ಲ ಎನ್ನುವ ಆರೋಪದೊಂದಿಗೆ, ಉತ್ತರಿಸಿ ಶಾಸಕರೇ ಎನ್ನುವ ಅಭಿಯಾನದ ಮನವಿ ಗ್ರಾಮೀಣ ಕ್ಷೇತ್ರದ ಶಾಸಕರೂ ಆಗಿರುವ ರಾಜ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಕಚೇರಿಗೆ ಶನಿವಾರ ತೆರಳಿದ್ದ ಕ್ಷೇತ್ರದ ಧನಂಜಯ್ ನೇತೃತ್ವದ ತಂಡ ಕಾರ್ಯಕರ್ತರು ತೆರಳಿ ಮನವಿ ಸಲ್ಲಿಸಿದರು

ಕರ್ನಾಟಕದಲ್ಲಿ ಕಾಂಗ್ರೆಸ್ ಸರಕಾರ ಅಸ್ತಿತ್ವಕ್ಕೆ ಬಂದಾಗಿನಿಂದ ಬೆಳಗಾವಿ ಗ್ರಾಮೀಣ ಕ್ಷೇತ್ರಕ್ಕೆ ಎಷ್ಟು ಅನುದಾನ ಬಂದಿದೆ ಎನ್ನುವುದನ್ನು ಸಾಕ್ಷಿ ಸಮೇತ ಗ್ರಾಮೀಣ ಶಾಸಕಿ ಲಕ್ಷ್ಮೀ ಹೆಬ್ಬಾಳ್ಕರ್ ಬಹಿರಂಗ ಪಡಿಸಬೇಕು ಎಂದು ಆಗ್ರಹಿಸಿ ಬಿಜೆಪಿ ಬೆಳಗಾವಿ ಗ್ರಾಮೀಣ ಮಂಡಲದ ಪದಾಧಿಕಾರಿಗಳು ಸಹ್ಯಾದ್ರಿ ನಗರದ ಶಾಸಕರ ನಿವಾಸದ ಬಳಿ ತೆರಳಿದ್ದರು. ಶಾಸಕರ ಅನುಪಸ್ಥಿತಿಯಲ್ಲಿ ಅವರ ಪುತ್ರ ಮೃಣಾಲ್ ಹೆಬ್ಬಾಳ್ಕರ್ ಅವರಿಗೆ ಮನವಿ ಸಲ್ಲಿಸಿದರು.

ಮನವಿ ಸ್ವೀಕರಿಸಿದ ಮೃಣಾಲ ಹೆಬ್ಬಾಳಕರ್, ಗ್ರಾಮೀಣ ಕ್ಷೇತ್ರದಲ್ಲಿ ಕಳೆದ 6 ವರ್ಷದಿಂದಲೂ ಸಾಕಷ್ಟು ಅಭಿವೃದ್ಧಿ ಕೆಲಸ ನಡೆಯುತ್ತಿದೆ. ಇನ್ನಷ್ಟು ಅಭಿವೃದ್ಧಿಯಾಗಬೇಕೆನ್ನುವ ಉದ್ದೇಶದಿಂದ ಕೆಲಸ ಮಾಡಲಾಗುತ್ತಿದೆ.

ಇದಕ್ಕೆ ನೀವೂ ಸೇರಿದಂತೆ ಎಲ್ಲರೂ ಸಹಕರಿಸಬೇಕು. ಅಭಿವೃದ್ಧಿಯ ಕಳಕಳಿಯಿಂದ ನೀವು ಇಲ್ಲಿಗೆ ಬಂದಿದ್ದರೆ ಅದಕ್ಕೆ ಸ್ವಾಗತ. ನಿಮ್ಮ ಪ್ರಶ್ನೆಗಳಿಗೆ ಶಾಸಕರು ಸೂಕ್ತ ರೀತಿಯಲ್ಲಿ ಉತ್ತರ ನೀಡುತ್ತಾರೆ ಎಂದು ತಿಳಿಸಿದರು.

ಈ ವೇಳೆ ಬಿಜೆಪಿ ಬೆಳಗಾವಿ ಗ್ರಾಮೀಣ ಮಂಡಲ ಅಧ್ಯಕ್ಷ ಧನಂಜಯ ಜಾಧವ ಮಾಧ್ಯಮಗಳೊಂದಿಗೆ ಮಾತನಾಡಿ, ಕಾಂಗ್ರೆಸ್ ಸರಕಾರ ಬಂದ ನಂತರ ಇಲ್ಲಿಯವರೆಗೆ ಗ್ರಾಮಾಂತರ ವಿಧಾನಸಭಾ ಕ್ಷೇತ್ರದಲ್ಲಿ ಯಾರು ಯಾವ ಕಾಮಗಾರಿಗಳನ್ನು ಮಾಡಿದ್ದಾರೆ, ಯಾರು ಯಾವ ಹೊಸ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ, ಎಷ್ಟು ಅನುದಾನ ತಂದಿದ್ದಾರೆ ಇದನ್ನು ಪುರಾವೆಯೊಂದಿಗೆ ಬಹಿರಂಗಪಡಿಸಬೇಕು, ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರಲು ಕಾಂಗ್ರೆಸ್ ಪಕ್ಷ ಗ್ಯಾರಂಟಿಯ ಭರವಸೆಗಳನ್ನು ನೀಡಿದೆ. ಸರ್ಕಾರದ ಅವ್ಯವಸ್ಥೆಯಿಂದ ರಾಜ್ಯ ದಿವಾಳಿಯ ಅಂಚಿನಲ್ಲಿದೆ. ಕಳೆದ ಹತ್ತು ತಿಂಗಳಲ್ಲಿ ಎಷ್ಟು ಹಣ ತಂದಿದ್ದಿರಿ ಹಾಗೂ ಯಾವ ಕೆಲಸಕ್ಕೆ ಎಂದು ಬಹಿರಂಗಪಡಿಸಬೇಕು ಎಂದು ಆಗ್ರಹಿಸಿದರು.

ಈ ವೇಳೆ ಮಾಧ್ಯಮಗಳು ಕೇಳಿದ ಪ್ರಶ್ನೆಗಳಿಗೆ ಮತ್ತು ಅಲ್ಲಿದ್ದ ಕಾಂಗ್ರೆಸ್ ಕಾರ್ಯಕರ್ತರು ಅಭಿವೃದ್ಧಿ ಯೋಜನೆಗಳ ಕುರಿತು ನೀಡಿದ ಪ್ರತ್ಯುತ್ತರಕ್ಕೆ

ಮಾತನಾಡಿದ ಕಾಂಗ್ರೆಸ್ ಕಾರ್ಯಕರ್ತರು

ಕಳೆದ 6 ವರ್ಷದಿಂದ ಗ್ರಾಮೀಣ ಕ್ಷೇತ್ರದಲ್ಲಿ ಎಂದೂ ಕಾಣದಷ್ಟು ಅಭಿವೃದ್ಧಿಯಾಗಿದೆ. ಕಳೆದ ಅವಧಿಯಲ್ಲಿ 1800 ಕೋಟಿ ರೂ.ಗಳಿಗಿಂತ ಹೆಚ್ಚು ಅನುದಾನ ತಂದಿದ್ದಾರೆ. ಹಾಗಾಗಿಯೇ ಜನರು ಇಷ್ಟೊಂದು ದೊಡ್ಡ ಪ್ರಮಾಣದಲ್ಲಿ ಮತ ನೀಡಿ ಲಕ್ಷ್ಮೀ ಹೆಬ್ಬಾಳಕರ್ ಅವರನ್ನು ಪುನರಾಯ್ಕೆ ಮಾಡಿದ್ದಾರೆ. ಈಗ ಪುನಃ ಗ್ರಾಮೀಣ ಕ್ಷೇತ್ರದ ಕೆರೆ ತುಂಬುವ ಯೋಜನೆಗೆ 800 ಕೋಟಿ ರೂ. ಅನುದಾನ ಮಂಜೂರು ಮಾಡಿಸಿದ್ದಾರೆ. ಅಭಿವೃದ್ಧಿಯ ಅರ್ಥ ನಿಮಗೆ ಗೊತ್ತಿದೆಯೇ? ಎಂದು ಕಾಂಗ್ರೆಸ್ ಕಾರ್ಯಕರ್ತರು ಪ್ರಶ್ನಿಸಿದರು.

ಇದಕ್ಕೆ ಉತ್ತರಿಸಲಾಗದೆ, ನಾವು ಎಲ್ಲ ಕಡೆ ಅಭಿಯಾನ ಮಾಡುತ್ತಿದ್ದೇವೆ. ಹಾಗಾಗಿ ಇಲ್ಲಿಯೂ ಬಂದಿದ್ದೇವೆ. ನಿಮಗೆ ಮುಜುಗರ ಉಂಟು ಮಾಡುವ ಉದ್ದೇಶ ನಮ್ಮದಲ್ಲ ಎನ್ನುತ್ತ ಬಿಜೆಪಿ ಕಾರ್ಯಕರ್ತರು ಅಲ್ಲಿಂದ ಕಾಲ್ಕಿತ್ತರು.

ಬಿಜೆಪಿ ಬೆಳಗಾವಿ ಗ್ರಾಮೀಣ ಮಂಡಲ ಅಧ್ಯಕ್ಷ ಧನಂಜಯ ಜಾಧವ, ಪ್ರದೀಪ ಪಾಟೀಲ, ಲಿಂಗರಾಜ ಹಿರೇಮಠ, ವಿಠ್ಠಲ ಕಲ್ಲಣ್ಣವರ, ಪ್ರಸಾದ ಬಾಚಿಕರ, ಶಾದ್ಯಕಶ್ರೀ ಹಿರೇಮಠ, ಗುನವಂತ ಸುತಾರ, ಚಂದ್ರಶೇಖರ್ ವಕ್ಕುಂದ, ವಿಲಾಸ ತಶೀಲ್ದಾರ್, ಗಣಪತರಾವ್ ದೇಸಾಯಿ, ಗುರು ಹಲಗತ್ತಿ, ರಾಜು ಖನಗಾಂವಕರ ಸೇರಿದಂತೆ ಬಿಜೆಪಿ ಕಾರ್ಯಕರ್ತರು ಉಪಸ್ಥಿತರಿದ್ದರು.

ಇಷ್ಟು ದಿನ ಎಲ್ಲಿ ಹೋಗಿದ್ದರು?:

ನಂತರ ಮಾಧ್ಯಮಗಳು ಮೃಣಾಲ ಹೆಬ್ಬಾಳಕರ್ ಅವರ ಪ್ರತಿಕ್ರಿಯೆ ಕೇಳಿದಾಗ, ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಕಾಮಗಾರಿ ಮಾಡಿರುವುದಕ್ಕೆ ನೀವೆಲ್ಲ ಸಾಕ್ಷಿ ಇದ್ದೀರಿ. ಲೋಕಸಭೆ ಚುನಾವಣೆ ಹತ್ತಿರ ಬಂದಿದ್ದರಿಂದ ಅವರು ಈಗ ಬಂದಿದ್ದಾರೆ. ಇಷ್ಟು ದಿನ ಇವರೆಲ್ಲ ಎಲ್ಲಿ ಹೋಗಿದ್ದರು? ಅಭಿವೃದ್ಧಿ ಮಾಡಿದ್ದರಿಂದಲೇ 1.10 ಲಕ್ಷದಷ್ಟು ಜನರು ಮತ ನೀಡಿ ಲಕ್ಷ್ಮೀ ಹೆಬ್ಬಾಳಕರ್ ಅವರನ್ನು ಪುನರಾಯ್ಕೆ ಮಾಡಿದ್ದಾರೆ. ಈಗ ಮತ್ತೆ ಅಭಿವೃದ್ಧಿಯ ಪರ್ವ ಆರಂಭವಾಗಿದೆ. ಕೆರೆ ತುಂಬುವ ಯೋಜನೆಗೆ ದೊಡ್ಡ ಮೊತ್ತ ಬಿಡುಗಡೆಯಾಗಿದೆ. ಒಳ್ಳೆಯ ಮುಹೂರ್ತ ನೋಡಿ ಪೂಜೆ ಮಾಡಿ ಕಾಮಗಾರಿ ಆರಂಭಿಸುತ್ತೇವೆ. ಎಲ್ಲರ ಸಹಕಾರದಿಂದ ಕ್ಷೇತ್ರವನ್ನು ಇನ್ನಷ್ಟು ಅಭಿವೃದ್ಧಿ ಮಾಡುವ ಗುರಿಯನ್ನಿಟ್ಟುಕೊಂಡು ನಾವು ಕೆಲಸ ಮಾಡುತ್ತಿದ್ದೇವೆ ಎಂದು ತಿಳಿಸಿದರು.

ಲೋಕಸಭಾ ಚುನಾವಣೆಗೆ ಸ್ಪರ್ಧಿಸುತ್ತೀರಾ ಎನ್ನುವ ಪ್ರಶ್ನೆಗೆ, ಚುನಾವಣೆಗೆ ಯಾರೇ ನಿಂತರೂ ಗೆಲ್ಲಿಸಿಕೊಂಡು ಬರಬೇಕೆನ್ನುವ ಉದ್ದೇಶದಿಂದ ನಾವು ಕೆಲಸ ಮಾಡುತ್ತಿದ್ದೇವೆ. ಅಂತಿಮವಾಗಿ ಹೈಕಮಾಂಡ್ ಮತ್ತು ಜಿಲ್ಲಾ ಉಸ್ತುವಾರಿ ಸಚಿವರು ಯಾರನ್ನು ಕಣಕ್ಕಿಳಿಸಬೇಕೆಂದು ನಿರ್ಧರಿಸುತ್ತಾರೆ. ಅದಕ್ಕೆ ನಾವೆಲ್ಲ ಬದ್ಧರಾಗಿರುತ್ತೇವೆ ಎಂದು ಮೃಣಾಲ ಹೆಬ್ಬಾಳಕರ್ ಉತ್ತರಿಸಿದರು.

ಒಟ್ಟಾರೆ, ಏನೋ ನಾಟಕ ಮಾಡಲು ಹೋದ ಬಿಜೆಪಿ ಕಾರ್ಯಕರ್ತರು ತೀವ್ರ ಅಪಹಾಸ್ಯಕ್ಕೊಳಗಾಗಿ ಅಲ್ಲಿಂದ ಹಿಂತಿರುಗಿದರು.

ಪ್ರೀತಿ ನಿರಾಕರಿಸಿದ ಬಾಲಕಿಯ ಹತ್ಯೆಗೈದ ಪಾಗಲ್ ಪ್ರೇಮಿ

ಬೆಂಗಳೂರು: ಪ್ರೀತಿ ನಿರಾಕರಿಸಿದ 15 ವರ್ಷದ ಬಾಲಕಿಯೊಬ್ಬಳನನ್ನು ಪಾಗಲ್ ಪ್ರೇಮಿಯೊಬ್ಬ ಹತ್ಯೆ ಮಾಡಿರುವ ಘಟನೆಯೊಂದು ಅನುಗೊಂಡನಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

ಕೋಲಾರ ಜಿಲ್ಲೆಯ ಬರಗೂರು ಗ್ರಾಮದ ನಿವಾಸಿ ಹತ್ಯೆಯಾದ ಬಾಲಕಿಯಾಗಿದ್ದಾಳೆ. ನಿತಿನ್ (23) ಬಾಲಕಿಯನ್ನ ಹತ್ಯೆಗೈದ ಆರೋಪಿಯಾಗಿದ್ದಾನೆ. ತನ್ನನ್ನು ಪ್ರೀತಿಸುವಂತೆ ಈತ ಬಾಲಕಿಯ ಹಿಂದೆ ಬಿದ್ದಿದ್ದ. 15 ದಿನಗಳ ಹಿಂದೆ ಕೂಡ ಆಕೆಯನ್ನು ಚುಡಾಯಿಸಿದ್ದ. ಇದರಿಂದ ಬೇಸತ್ತಿದ್ದ ಬಾಲಕಿ ಪೋಷಕರಿಗೆ ಈ ಬಗ್ಗೆ ತಿಳಿಸಿ, ಮಾಲೂರು ಪೊಲೀಸ್ ಠಾಣೆಗೆ ದೂರು ನೀಡಲು ಹೋಗಿದ್ದಳು. ಬಳಿಕ ಎರಡೂ ಗ್ರಾಮದ ಜನರು ಪರಸ್ಪರ ಕುಳಿತು ಮಾತನಾಡಿ, ರಾಜಿ ಮಾಡಿಸಿದ್ದರು.

ಕಳೆದ ಬುಧವಾರ ಶಾಲೆಗೆ ಹೋಗಿದ್ದ ಬಾಲಕಿ ಮನೆಗೆ ವಾಪಸ್ಸಾಗಿರಲಿಲ್ಲ. ಬಳಿಕ ಪೋಷಕರು ಪೊಲೀಸರಿಗೆ ದೂರು ನೀಡಿದ್ದರು. ಈ ಮಧ್ಯ ಗುರುವಾರ ಸಂಜೆ ಹೊಸಕೋಟೆ ಸಮೀಪದ ಬಾಣರಹಳ್ಳಿ ಗ್ರಾಮದ ಪೊದೆಗಳ ಮಧ್ಯೆ ಮೃತ ವ್ಯಕ್ತಿ ಪತ್ತೆಯಾಗಿದ್ದು, ಕುರಿ ಮೇಯಿಸುತ್ತಿದ್ದಾಗ ಕೆಲವರು ಇದನ್ನು ಗಮನಿಸಿದ್ದಾರೆ ಪೊಲೀಸರಿಗೆ ಮಾಹಿತಿ ನೀಡಿದ್ದರು.

ಈ ನಡುವೆ ನಿತಿನ್ ಕೂಡ ಕತ್ತು ಕೊಯ್ದುಕೊಂಡು ಆತ್ಮಹತ್ಯೆಗೆ ಯತ್ನಿಸಿದ್ದಾನೆ. ಬಳಿಕ ಕುಟುಂಬಸ್ಥರು ಆತನನ್ನು ಆಸ್ಪತ್ರೆಗೆ ದಾಖಲಿಸಿದ್ದಾರೆ. ಇದೀಗ ನಿತಿನ್ ಇನ್ನು ಪ್ರಜ್ಞಾಹೀನ ಸ್ಥಿತಿಯಲ್ಲಿದ್ದು, ಚಿಕಿತ್ಸೆ ಮುಂದುವರೆದಿರುವ ಕಾರಣ ಬಾಲಕಿಯ ಅಪಹರಣ ಹಾಗೂ ಹತ್ಯೆ ಕುರಿತು ಮಾಹಿತಿಗಳು ಲಭ್ಯವಾಗಿಲ್ಲ ಎಂದು ಹಿರಿಯ ಅಧಿಕಾರಿಗಳು ಹೇಳಿದ್ದಾರೆ. ಅನುಗೊಂಡನಹಳ್ಳಿ ಪೊಲೀಸರು ಪೋಕ್ಸೋ ಕಾಯ್ದೆಯಡಿಯಲ್ಲಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಮಂಗನ ಕಾಯಿಲೆಗೆ ಹೊಸ ವ್ಯಾಕ್ಸಿನ್: ಸಚಿವ ದಿನೇಶ್ ಗುಂಡೂರಾವ್

ಉಡುಪಿ: ರಾಜ್ಯದಲ್ಲಿ ಮಂಗನ ಕಾಯಿಲೆ ಹೆಚ್ಚಳವಾಗುತ್ತಿರುವ ವಿಚಾರವಾಗಿ ಮಾತನಾಡಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಹಿಂದೆ ಇರುವ ವ್ಯಾಕ್ಸಿನ್ ಬಳಕೆ ಮಾಡಬೇಡಿ. ಹೊಸ ವ್ಯಾಕ್ಸಿನ್ ಬಳಕೆ ಬಗ್ಗೆ ಖಅಒಖ ಜೊತೆ ಚರ್ಚೆ ನಡೆಯುತ್ತಿದೆ. ಹೈದರಾಬಾದ್ ಸಂಸ್ಥೆ ಐಸಿಎಂಆರ್ ಸಂಶೋಧನೆ ಮಾಡಿ ವ್ಯಾಕ್ಸಿನ್ ತಯಾರಿಸಲು ಒಪ್ಪಿಗೆ ನೀಡಿದೆ. ಮುಂದಿನ ವರ್ಷಕ್ಕೆ ಒಳ್ಳೆಯ ಚುಚ್ಚುಮದ್ದು ಸಿಗಬಹುದು ಎಂದರು.

ಮಾತನಾಡಿದ ಅವರು, ಮಳೆಗಾಲ ಆರಂಭ ಮತ್ತು ಅಂತ್ಯದಲ್ಲಿ ಮಂಗನ ಕಾಯಿಲೆ ಹೆಚ್ಚಳವಾಗುತ್ತದೆ. ಮಾರ್ಚ್ ವರೆಗೆ ಜನರು ಬಹಳ ಎಚ್ಚರಿಕೆಯಿಂದ ಇರಬೇಕು. ರಾಜ್ಯದಲ್ಲಿ 2 ಸಾವಾಗಿದೆ, ಇಬ್ಬರು ಐಸಿಯುನಲ್ಲಿದ್ದಾರೆ. ರಾಜ್ಯದಲ್ಲಿ ಒಟ್ಟು 70 ಕೆಎಫ್ಡಿ ಪ್ರಕರಣ ದಾಖಲಾಗಿದೆ. ಒಟ್ಟು 20 ಸಕ್ರಿಯ ಪ್ರಕರಣಗಳು ಇವೆ. ಪರಿಹಾರ ನೀಡುವ ಬಗ್ಗೆ ಸರ್ಕಾರಿ ಮಟ್ಟದಲ್ಲಿ ಚರ್ಚೆ ಮಾಡುತ್ತೇವೆ. ಸಾವು ಆಗದೆ ಇರುವ ಬಗ್ಗೆ ಮುನ್ನೆಚ್ಚರಿ ಕಾರ್ಯಕ್ರಮ ಕೈಗೊಳ್ಳುತ್ತೇವೆ. ಲಕ್ಷಣಗಳು ಬಂದ ಕೂಡಲೇ ಚಿಕಿತ್ಸೆ ಪಡೆದುಕೊಳ್ಳಿ ಎಂದರು.

ರಾಜ್ಯದಲ್ಲಿ ಕೋವಿಡ್ ನಿಯಂತ್ರಣದಲ್ಲಿದೆ. ಎಳೆ ಪ್ರಾಯದ ಹೃದಯಘಾತ ಪ್ರಕರಣ ಹೆಚ್ಚುತ್ತದೆ. ಹೃದಯಾಘಾತಕ್ಕೆ ಬೇರೆ ಬೇರೆ ಕಾರಣಗಳು ಇರುತ್ತದೆ. ಕ್ಯಾನ್ಸರ್, ಕಿಡ್ನಿ ಸಮಸ್ಯೆ, ಬಿಪಿ, ಶುಗರ್ ಹೆಚ್ಚಾಗಿ ಬಾಧಿಸುತ್ತಿದೆ. ಜಂಕ್ ಫುಡ್, ಸಂಸ್ಕರಣೆ ಆದ ಆಹಾರ ಆರೋಗ್ಯಕ್ಕೆ ಒಳ್ಳೆಯದಲ್ಲ. ಯುವಕರಲ್ಲಿ ದೈಹಿಕ ಚಟುವಟಿಕೆಗಳು ಕಡಿಮೆಯಾಗಿದೆ. ಆಹಾರ, ಸಿಹಿ ಪದಾರ್ಥ ಮಾಲಿನ್ಯದಿಂದ ಹೃದಯಾಘಾತ ಬರುವ ಸಾಧ್ಯತೆ ಹೆಚ್ಚು ಎಂದರು.

ಶಾಲೆಯ ಅತಿಥಿ ಶಿಕ್ಷಕನ ಭೀಕರ ಕೊಲೆ

ಕುಣಿಗಲ್: ಅತಿಥಿ ಶಿಕ್ಷಕರೊಬ್ಬರನ್ನು ದುಷ್ಕರ್ಮಿಗಳು ಮಚ್ಚಿನಿಂದ ಕೊಚ್ಚಿ ಕೊಲೆ ಮಾಡಿದ ಭೀಕರ ಘಟನೆ ಕುಣಿಗಲ್ ತಾಲೂಕಿನ ಕುಳ್ಳನಂಜಯ್ಯನಪಾಳ್ಯದಲ್ಲಿ ನಡೆದಿದೆ. ಮೋದೂರು ಶಾಲೆಯಲ್ಲಿ ಅತಿಥಿ ಶಿಕ್ಷಕನಾಗಿದ್ದ ಮರಿಯಪ್ಪ (47) ಕೊಲೆಯಾದವರು.

ಮೋದೂರು ಶಾಲೆಯಲ್ಲಿ ಶಿಕ್ಷಕರಾಗಿದ್ದು ಜನಾನುರಾಗಿಯಾಗಿದ್ದ ಮರಿಯಪ್ಪ ಅವರ ಶವ ಕುಳ್ಳನಂಜಯ್ಯನ ಪಾಳ್ಯದ ಜಮೀನೊಂದರಲ್ಲಿ ಶನಿವಾರ ಮುಂಜಾನೆ ಪತ್ತೆಯಾಗಿದೆ.

ಶುಕ್ರವಾರ ಅಮಾವಾಸ್ಯೆ ಪ್ರಯುಕ್ತ ವಾಮಾಚಾರ ಪ್ರಯೋಗಕ್ಕೆ ಹೋಗಿ ಬೈಕ್ ನಲ್ಲಿ ಸ್ವಗ್ರಾಮಕ್ಕೆ ವಾಪಸ್ ಬರುತ್ತಿದ್ದಾಗ ದುಷ್ಕರ್ಮಿಗಳು ದಾಳಿ ನಡೆಸಿ ಹತ್ಯೆ ಮಾಡಿರುಬಹುದು ಎಂದು ಪೊಲೀಸರು ಶಂಕಿಸಿದ್ದಾರೆ. ಕುಣಿಗಲ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ. ದುಷ್ಕರ್ಮಿಗಳು ಅವರನ್ನು ಜಮೀನಿನ ಮಧ್ಯ ಭಾಗದಲ್ಲಿ ಕೊಲೆ ಮಾಡಿ ಎಸೆದು ಹೋಗಿದ್ದಾರೆ. ಅವರ ತಲೆ ಮತ್ತು ಭುಜದ ಭಾಗಕ್ಕೆ ಮಚ್ಚಿನಿಂದ ಕಡಿಯಲಾಗಿದೆ. ಹಲವಾರು ಬಾರಿ ತಲೆಯನ್ನು ಕೊಚ್ಚಿದಂತೆ ಕಾಣುತ್ತಿದ್ದು, ಭಯಾನಕ ಪರಿಸ್ಥಿತಿ ನಿರ್ಮಾಣವಾಗಿದೆ.

ಇನ್ಮುಂದೆ 6 ವರ್ಷ ಮೇಲ್ಪಟ್ಟ ಮಕ್ಕಳಿಗೆ ಹೆಲ್ಮೆಟ್

ಬೆಂಗಳೂರು: 6 ವರ್ಷ ಮೇಲ್ಪಟ್ಟ ಮಕ್ಕಳನ್ನು ಬೈಕ್‌ನಲ್ಲಿ ಕರೆದೊಯ್ಯುವಾಗ ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು ಎಂದು ಪೊಲೀಸ್ ಇಲಾಖೆ ಸೂಚಿಸಿದೆ.

ಮಕ್ಕಳನ್ನು ಶಾಲೆಗೆ ಕರೆದುಕೊಂಡು ಬರುವ ಪೋಷಕರು ಮಕ್ಕಳಿಗೆ ಅಲ್ಲದೇ ತಾವು ಕೂಡ ಹೆಲ್ಮೆಟ್ ಧರಿಸದೇ ಬರುತ್ತಿದ್ದಾರೆ. ಜೊತೆಗೆ ಶಾಲಾ ಆಟೋ, ಖಾಸಗಿ ಕಾರು, ಟಿಟಿ ವಾಹನಗಳಲ್ಲಿ ನಿಗದಿತ ಮಕ್ಕಳಿಗಿಂತ ಹೆಚ್ಚಿನ ಮಕ್ಕಳನ್ನು ಕರೆದುಕೊಂಡು ಹೋಗುತ್ತಿದ್ದಾರೆ ಎಂದು ಸಾಕಷ್ಟು ದೂರುಗಳು ಬಂದಿರುವುದಾಗಿ ಪೊಲೀಸ್ ಇಲಾಖೆ ತಿಳಿಸಿದೆ.

ಮಕ್ಕಳನ್ನು ಶಾಲೆಗೆ ಬಿಡಲು ಬರುವ ಪೋಷಕರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು. 6 ವರ್ಷ ಮೇಲ್ಪಟ್ಟ ಮಕ್ಕಳು ಸಹ ಇನ್ಮುಂದೆ ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು. ಇಷ್ಟಬಂದಂತೆ ಖಾಸಗಿ ವಾಹನಗಳಲ್ಲಿ ಹೆಚ್ಚಿನ ಮಕ್ಕಳನ್ನು ಕರೆದುಕೊಂಡು ಹೋಗುವಂತಿಲ್ಲ ಎಂದು ಉಲ್ಲೇಖಿಸಲಾಗಿದೆ.

ಶಾಲಾ ಆಟೋ, ಖಾಸಗಿ ಕಾರು, ಟಿಟಿ ವಾಹನಗಳಲ್ಲಿ ನಿಗದಿತ ಮಿತಿಗಿಂತ ಹೆಚ್ಚಿನ ಮಕ್ಕಳನ್ನು ಶಾಲೆಗೆ ಕರೆದೊಯ್ಯುವವರು ಮತ್ತು ಮೂರಕ್ಕೂ ಹೆಚ್ಚು ಮಕ್ಕಳನ್ನು ಗಾಡಿಯಲ್ಲಿ ಕರೆದುಕೊಂಡು ಹೋಗುವ ಪೋಷಕರ ವಿರುದ್ಧವೂ ಕ್ರಮಕೈಗೊಳಲಾಗುತ್ತದೆ. ಸಾಕಷ್ಟು ದೂರುಗಳು ಬಂದ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆ ಈ ನಿರ್ಧಾರವನ್ನು ತೆಗೆದುಕೊಂಡಿದೆ. ಸಾರ್ವಜನಿಕರು ಕಡ್ಡಾಯವಾಗಿ ಹೆಲ್ಮೆಟ್ ಧರಿಸುವಂತೆ ಎಚ್ಚರಿಸಿದ್ದು, ಶಾಲೆಗಳ ಬಳಿ ಸ್ಪೆಷಲ್ ಡ್ರೈವ್ ಮಾಡಲು ಟ್ರಾಫಿಕ್ ಪೊಲೀಸರು ಸಿದ್ಧತೆ ನಡೆಸುತ್ತಿದ್ದಾರೆ.

ರಾಮನಿಗೆ ಅವಮಾನ: ಶಾಲಾ ಶಿಕ್ಷಕಿ ವಿರುದ್ಧ ಕ್ರಮಕ್ಕೆ ಹಿಂದುತ್ವವಾದಿಗಳು, ಪೋಷಕರ ಆಗ್ರಹ

ಫೆ 12ರಿಂದ ಅಧಿವೇಶನ: ವಿಧಾನಸೌಧ ಸುತ್ತ ನಿಷೇಧಾಜ್ಞೆ ಜಾರಿ

ಬೆಂಗಳೂರು: ಫೆ. 12ರಿಂದ ನಡೆಯುವ ಜಂಟಿ ಅಧಿವೇಶನದಲ್ಲಿ ವಿಧಾನಸೌಧ ಸುತ್ತ 2 ಕಿಮೀ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿ ಮಾಡಲಾಗಿದೆ. ಅನುಮತಿ ಪಡೆದು ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆಗೆ ಅವಕಾಶ ಪಡೆಯಬಹುದು ಎಂದು ಬೆಂಗಳೂರು ನಗರ ಪೊಲೀಸ್ ಆಯುಕ್ತರು ಹೇಳಿದ್ದಾರೆ.

ಫೆಬ್ರವರಿ 12ರಿಂದ 23ರ ತನಕ ವಿಧಾನಸೌಧದಲ್ಲಿ ಜಂಟಿ ಅಧಿವೇಶನ ನಡೆಯಲಿದ್ದು, ಪ್ರತಿಬಂಧಕಾಜ್ಞೆಯನ್ನು ಹೊರಡಿಸಲಾಗಿದೆ. ಈ ಸಮಯದಲ್ಲಿ ವಿವಿಧ ರಾಜಕೀಯ ಪಕ್ಷಗಳು, ವಿವಿಧ ಸಂಘಟನೆಗಳು ತಮ್ಮ ಬೇಡಿಕೆಗಳಿಗೆ ಒತ್ತಾಯಿಸಿ ಮೆರವಣಿಗೆ, ಪ್ರತಿಭಟನೆ, ಧರಣಿ, ಸತ್ಯಾಗ್ರಹ, ವಿಧಾನಸೌಧ ಮುತ್ತಿಗೆ ಸೇರಿದಂತೆ ನಾನಾ ರೀತಿಯ ಹೋರಾಟದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಸಾಧ್ಯತೆ ಇದೆ.

ಇದರಿಂದ ಅಧಿವೇಶನದ ಕಾರ್ಯ ಕಲಾಪಗಳಿಗೆ ಅಡಚಣೆ ಉಂಟಾಗುವುದರ ಜೊತೆಗೆ ಸಾರ್ವಜನಿಕ ನೆಮ್ಮದಿಗೆ ಭಂಗ ಹಾಗೂ ಸುಗಮ ಸಂಚಾರಕ್ಕೆ ತೊಂದರೆಯುಂಟಾಗುವ ಸಾಧ್ಯತೆ ಹೆಚ್ಚಿದೆ ಎಂಬ ಮಾಹಿತಿ ಗುಪ್ತಚರ ಪಡೆಯಿಂದ ತಿಳಿದು ಬಂದಿದೆ. ವಿಶೇಷ ಅಧಿವೇಶನದ ಕಲಾಪಗಳು ಸುಗಮವಾಗಿ ನಡೆಯುವ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಪ್ರತಿಬಂಧಕಾಜ್ಞೆಯನ್ನು ಹೊರಡಿಸಲಾಗಿದೆ. ಫ್ರೀಡಂ ಪಾರ್ಕ್ನಲ್ಲಿ ಪ್ರತಿಭಟನೆ ನಡೆಸಬಹುದು. ಬೆಂಗಳೂರು ನಗರ ಪೊಲೀಸ್ ಆಯುಕ್ತ ದಯಾನಂದ್ ಅವರು, ಫೆಬ್ರವರಿ 12 ರಿಂದ ಫೆ 23 ರವರೆಗೆ ಪ್ರತಿದಿನ ಬೆಳಿಗ್ಗೆ 6 ಗಂಟೆಯಿಂದ ಮಧ್ಯರಾತ್ರಿ 12 ಗಂಟೆಯವರೆಗೆ ಬೆಂಗಳೂರು ನಗರದ ವಿಧಾನಸೌಧ ಕಟ್ಟಡದ ಸುತ್ತಲೂ 2 ಕಿಮೀ ವ್ಯಾಪ್ತಿಯಲ್ಲಿ ನಿಬಂಧನೆಗಳಿಗೆ ಒಳಪಡುವಂತೆ ನಿಷೇದಾಜ್ಞೆಯನ್ನು ವಿಧಿಸಲಾಗಿದೆ. ಆದರೆ, ಅನುಮತಿ ಪಡೆದು ಫ್ರೀಡಂಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಲು ಅವಕಾಶ ಪಡೆಯಬಹುದು ಎಂದಿದ್ದಾರೆ.

ಕಾನೂನು ಭಂಗ ಉಂಟು ಮಾಡುವ ಉದ್ದೇಶದಿಂದ 5 ಅಥವಾ ಅದಕ್ಕಿಂತ ಹೆಚ್ಚು ಜನರ ಗುಂಪು ಸೇರುವುದನ್ನು ನಿಷೇಧಿಸಲಾಗಿದೆ. ಮೆರವಣಿಗೆ, ಸಭೆಗಳನ್ನು ನಡೆಸುವಂತಿಲ್ಲ.

ಶಸ್ತ್ರಗಳು, ದೊಣ್ಣೆ, ಕತ್ತಿ, ಈಟಿ, ಗದೆ, ಕಲ್ಲು, ಇಟ್ಟಿಗೆ, ಚಾಕು ಸೇರಿದಂತೆ ಮಾರಕಾಸ್ತ್ರ ಅಥವಾ ದೈಹಿಕ ಹಿಂಸೆಯನ್ನುಂಟು ಮಾಡುವ ಯಾವುದೇ ವಸ್ತುಗಳನ್ನು ಜೊತೆಯಲ್ಲಿ ಕೊಂಡೊಯ್ಯುವಂತಿಲ್ಲ. ಯಾವುದೇ ಸ್ಫೋಟಕ ವಸ್ತುಗಳನ್ನು ಸಿಡಿಸುವುದು, ಕಲ್ಲು, ಕ್ಷಿಪಣಿ ಅಥವಾ ಉಪಕರಣಗಳ ಸಾಗಾಟ ಮತ್ತು ಶೇಖರಿಸುವುದನ್ನು ನಿಷೇಧಿಸಿದೆ.

ವ್ಯಕ್ತಿಗಳ ಅಥವಾ ಅವರ ಶವಗಳ ಪ್ರತಿಕೃತಿಗಳ ಪ್ರದರ್ಶಿಸುವ, ಪ್ರಚೋದಿಸುವ ಬಹಿರಂಗ ಘೋಷಣೆಗಳನ್ನು ಕೂಗುವುದು, ಸಂಜ್ಞೆ ಮಾಡುವುದು, ಹಾಡುವುದು, ಸಂಗೀತ ನುಡಿಸುವುದು, ಚಿತ್ರ, ಸಂಕೇತಗಳನ್ನು, ಭಿತ್ತಿ ಪತ್ರ ಅಥವಾ ಇತರೆ ಯಾವುದೇ ವಸ್ತು ಅಥವಾ ಪದಾರ್ಥಗಳನ್ನು ಪ್ರದರ್ಶಿಸುವುದನ್ನು ನಿಷೇಧಿಸಲಾಗಿದೆ.

14ರಂದು ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ಸಭೆ

ಮಂಗಳೂರು: ಕೇಂದ್ರ ಕಾರ್ಯಕ್ರಮಗಳ ಅನುಗಣ್ಯನದ ಬಗ್ಗೆ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ(ದಿಶಾ) ಸಭೆ ಫೆಬ್ರವರಿ 14ರಂದು ಬೆಳಿಗ್ಗೆ 10.30ಕ್ಕೆ ದ.ಕ ಜಿಲ್ಲಾ ಪಂಚಾಯತ್ ನೇತ್ರಾವತಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಲೋಕಸಭಾ ಸದಸ್ಯ ನಳಿನ್ ಕುಮಾರ್ ಕಟೀಲ್ ಅವರು ಸಭೆಯ ಅಧ್ಯಕ್ಷತೆ ವಹಿಸುವರು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಹುಮುಖ ವ್ಯಕ್ತಿತ್ವದ ಹಿರಿಯರಂಗಕರ್ಮಿ ಡಾ.ಅರವಿಂದ ಕುಲಕರ್ಣಿ

ಅನಂತ ಪಪ್ಪು

ಮುಂದುವರೆದ ಸಂಚಿಕೆ: ಅರವಿಂದರು ವೃತ್ತಿಯಿಂದ ನೀವೃತ್ತಿ ಹೊಂದಿದ್ದರೂ ರಂಗಭೂಮಿಯಲ್ಲಿ ಕ್ರಿಯಾಶೀಲರಾಗಿದ್ದಾರೆ. ಇವರಲ್ಲಿ ಅಭಿನಯ, ನಾಟಕ ರಚನೆ, ನಾಟಕ ನಿರ್ದೇಶನ ಈ ಮೂರು ಪ್ರತಿಬೆಗಳು ಸಂಗಮಿಸಿವೆ.

ಶಾಲಾದಿನಗಳಲ್ಲಿ ಅಭಿನಯದಲ್ಲಿ ಆಸಕ್ತಿ ಬೆಳೆಸಿಕೊಂಡು ಕಲಿತದ್ದು ಕಲಿತದ್ದನ್ನು ಸರಳವಾದ ಕನ್ನಡದಲ್ಲಿ ಮಾತನಾಡಿದ್ದು, ಬರೆದದ್ದು ನೂರಾರು ನಾಟಕಗಳನ್ನು ನೋಡಿ–ಆಡಿ ಜೀರ್ಣಿಸಿಕೊಂಡ ಅನುಭವ ರಸಾಯನಿಕವಾಗಿದ್ದು ಇದರಿಂದ ರಂಗಭೂಮಿ ಆಯಾಮಗಳು ತಿಳಿದಿಕೊಳ್ಳಲು ಸಹಕಾರಿಯಾದವು ಎನ್ನುವ ಅರವಿಂದರು ಸಾಹಿತ್ಯ ರಂಗಭೂಮಿ, ವಿಜ್ಞಾನ, ಸಂಗೀತ, ಶಿಕ್ಷಣ, ಭಾಷೆ, ಸಂಸ್ಕೃತಿ ಹೀಗೆ ಹತ್ತು ಹಲವು ಕ್ಷೇತ್ರಗಳಲ್ಲಿ ತಮ್ಮನ್ನು ತೊಡಗಿಸಿಕೊಂಡು ಯಶಸ್ವಿ ನಾಟಕಕಾರರಾಗಿ, ನಿರ್ದೇಶಕರಾಗಿ ಈ ವರೆಗೆ ಅವರು ಅಂದಾಜು 55 ನಾಟಕಗಳಲ್ಲಿ ಅಭಿನಯಿಸಿದ್ದು, 3 ನಾಟಕಗಳನ್ನು ಬರೆದು ನಿರ್ದೇಶಿಸಿ ಕನ್ನಡ ರಂಗಭೂಮಿಯ ಇತಿಹಾಸದಲ್ಲಿ ಒಂದು ಮುಖ್ಯ ಕೊಂಡಿಯಾಗಿದ್ದಾರೆ.

ರಂಗಭೂಮಿಯಲ್ಲಿ ಕ್ರಿಯಾಶೀಲರಾಗಿದ್ದರೂ ಬೆಳಗಾವಿಯ ರಂಗಸಂಪದ ನಾಟಕಗಳನ್ನು ನೋಡಲು ಮಾತ್ರ ತಮ್ಮನ್ನು ಸೀಮಿತ ಮಾಡಿಕೊಂಡಿದ್ದ ಡಾ.ಅರವಿಂದರಿಗೆ ಕುಂಟುತ್ತ ತೆವಳುತ್ತ ಸಾಗಿದ್ದ ರಂಗಸಂಪದ ಚಟುವಟಿಕೆಗಳಿಗೆ ಶಕ್ತಿ ತುಂಬಲು ಡಾ.ಅರವಿಂದ ಕುಲಕರ್ಣಿ ಅವರನ್ನು ರಂಗಸಂಪದ 2016ರಲ್ಲಿ ಅಧ್ಯಕ್ಷರನ್ನಾಗಿ ನೇಮಕ ಮಾಡುತ್ತದೆ. ತಟಸ್ಥವಾಗಿದ್ದ ರಂಗಸಂಪದ ರಂಗಭೂಮಿ ಚಟುವಟಿಕೆಗಳಿಗೆ ಚಾಲನೆ ನೀಡಿದ ಅರವಿಂದರು ಗತಿ, ಸುಖಗಳಿಂದ ದೂರವಾಗಿ, ನಾ ಸತ್ತಿಲ್ಲ, ಯು ಟರ್ನ, ಕವಿಗಳು ಸರ್ ಕವಿಗಳು, ಕಾಯುವ ಕಾಯಕ, ಪ್ರಿಂಟಿಂಗ್ ಮಶೀನ್, ಪಂಚಕನ್ಯಾ ಸ್ಮರೇ ನಿತ್ಯಂ ಮುಂತಾದ ನಾಟಕಗಳನ್ನು ತಯಾರುಮಾಡಿ ಬೆಳಗಾವಿ ಸೇರಿದಂತೆ ಬೆಂಗಳೂರು, ಉಡುಪಿ, ಮೈಸೂರು ರಂಗಾಯಣ, ಧಾರವಾಡ ರಂಗಾಯಣ, ರಂಗಶಂಕರ ಬೆಂಗಳೂರುಗಳಲ್ಲಿ ಪ್ರದರ್ಶನಮಾಡುತ್ತಾರೆ. ಈ ಎಲ್ಲ ನಾಟಕಗಳಲ್ಲಿ ಅರವಿಂದರು ತಮ್ಮ ಮನೋಜ್ಞ ಅಭಿನಯವನ್ನು ನೀಡಿ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

"ಸುಖಗಳಿಂದ ದೂರವಾಗಿ" ನಾಟಕವನ್ನು ಮರಾಠಿಯಿಂದ ಕನ್ನಡಕ್ಕೆ ಗುರುನಾಥ ಕುಲಕರ್ಣಿ ಹಾಗೂ ಅರವಿಂದರು ಜೊತೆಗೂಡಿ ಅನುವಾದಿಸಿದ್ದು, ಈ ನಾಟಕದಲ್ಲಿ ಸ್ವತ: ಮುಖ್ಯಪಾತ್ರದಲ್ಲಿ ಅರವಿಂದ ದಂಪತಿಗಳು ಅಭಿನಯಿಸಿದ್ದು, ಇವರ ಅಭಿನಯ ಪ್ರೇಕ್ಷಕರನ್ನು ಮಂತ್ರಮುಗ್ದಗೊಳಿಸಿದೆ. ಪಂಚಕನ್ಯಾ ಸ್ಮರೇ ನಿತ್ಯಂ ನಾಟಕವನ್ನು ಸ್ವತ: ಅರವಿಂದ ನಿರ್ದೇಶಿಸಿದ್ದು ರಂಗಾಯಣ ಮೈಸೂರಿನ ಬಹುರೂಪಿ ರಾಷ್ಟ್ರೀಯ ನಾಟಕೋತ್ಸವದಲ್ಲಿ ಪ್ರದರ್ಶನಗೊಂಡು ಸಮರ್ಥ ನಿರ್ದೇಶಕ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

ನಿವೃತ್ತಿ ನಂತರ ರಂಗಭೂಮಿಯಲ್ಲಿ ತಮ್ಮನ್ನು ಸಂಪೂರ್ಣವಾಗಿ ತೊಡಗಿಸಿಕೊಂಡಿರುವ ಅರವಿಂದರು ಈ ವರೆಗೆ ಹಿಂತಿರುಗಿ ನೋಡುವ ಪ್ರಮಯವೇ ಬರಲಿಲ್ಲವೆಂದೆ ಹೇಳಬೇಕು. ಈಗ ರಂಗಸಂಪದ ಸಾಂಸ್ಕೃತಿಕವಾಗಿ ಶ್ರೀಮಂತವಾಗಿದ್ದು ಆರ್ಥಿಕವಾಗಿ ಸಬಲವಾಗಿಡಾ. ಅರವಿಂದ ಕುಲಕರ್ಣಿ ಅವರ ಮುಂದಾಳತ್ವದಲ್ಲಿ ಮುನ್ನೆಡೆಯುತ್ತಿದೆ. 650 ಕ್ಕಿಂತ ಹೆಚ್ಚು ಪ್ರೇಕ್ಷಕ ಸದಸ್ಯರನ್ನು ಹೊಂದಿದರಂಗಸಂಪದ ಪ್ರತಿ

ವರ್ಷ ತನ್ನ ಪ್ರೇಕ್ಷಕ ಸದಸ್ಯರಿಗೆ 10 ನಾಟಕಗಳನ್ನು ನೀಡುತ್ತ ಬಂದಿದ್ದು, ತಮ್ಮ ರಂಗಸಂಪದದಲ್ಲಿಯ ಯಶಸ್ಸಿಗೆ ಹೆಸರಾಂತ ನಟ, ನಿರ್ದೇಶಕ ರಂಗಕರ್ಮಿ ಶ್ರೀಪತಿ ಮಂಜನಬೈಲು ಕಾರಣರೆಂದು ಅರವಿಂದರು ಅಭಿಮಾನದಿಂದ ಹೇಳುತ್ತಾರೆ.

ಕಳೆದ 49 ವರ್ಷಗಳಿಂದ ರಂಗಸಂಪದ ಹವ್ಯಾಸಿ ಕಲಾವಿದರ ತಂಡ ತನ್ನ ಚಟುವಟಿಕೆಗಳನ್ನು ಜೀವಂತವಾಗಿಟ್ಟಿದ್ದು ಅತೀ ಹಳೆಯ ಹವ್ಯಾಸಿ ಕಲಾ ತಂಡವೆಂದು ಬೆಳಗಾವಿ ಇತಿಹಾಸದಲ್ಲಿ ದಾಖಲಾಗಬೇಕಿರುವ ವಿಷಯವಾಗಿದೆ.

ಕರೋನಾ ಸಂದರ್ಭದಲ್ಲಿಯೂ ರಂಗಮಂದಿರಕ್ಕೆ ಬರಲು ಪ್ರೇಕ್ಷಕರು ಅಳುಕಿದಾಗಲೂ ಅರವಿಂದರು "ಶೋ ಮಸ್ಟ್ ಗೋ ಆನ್" ಎಂಬ ಸಂದೇಶದ ಮೇರೆಗೆ "ಮಿ ಟೂ, "ಪಂಚಕನ್ಯಾ ಸ್ಮರೇ ನಿತ್ಯಂ", ಹರಟೆ ಹೀಗೆ ರಂಗ ಚಟುವಟಿಕೆಗಳನ್ನು ಫೇಸ್‌ಬುಕ್ ಆನ್‌ಲೈನ್ ಲೈವ್ ನಲ್ಲಿ ನಾಟಕಗಳನ್ನು ಪ್ರದರ್ಶಿಸಿದರು. ಇದು ಕರ್ನಾಟಕದ ಇತಿಹಾಸದಲ್ಲಿ ಮೊದಲ ಪ್ರಯೋಗವಾಗಿ ದಾಖಲೆಯಾಗಿದೆ. ಈ ನಾಟಕಗಳನ್ನು ಸುಮಾರು 400 ಜನ ನೋಡಿ ಆನಂದಿಸಿದ್ದಾರೆ.

ಅದರಂತೆ ಬೆಳಗಾವಿಯ ರಂಗಸಂಪದ ಹವ್ಯಾಸಿ ಕಲಾ ತಂಡದ ಚಟುವಟಿಕೆಗಳನ್ನು ಗಮನಿಸಿ ಕರ್ನಾಟಕ ನಾಟಕ ಅಕಾಡಮಿ "ಅತ್ಯುತ್ತಮ ಹವ್ಯಾಸಿ ಕಲಾ ತಂಡ ದತ್ತಿ ಪ್ರಶಸ್ತಿ" ಯನ್ನು ರಂಗಸಂಪದ ಹವ್ಯಾಸಿ ತಂಡಕ್ಕೆ ನೀಡಿ ಗೌರವಿಸಿದೆ.

ಅರವಿಂದರ ಧರ್ಮಪತ್ನಿ ಪದ್ಮಾ ಕುಲಕರ್ಣಿ ಶಿಕ್ಷಣ ಮಹಾವಿಧ್ಯಾಲಯದ ನಿವೃತ್ತ ಪ್ರಾಂಶುಪಾಲರು ಹಾಗೂ ಕಲಾವಿದೆ ಅರವಿಂದರ ಹೆಗಲಿಗೆ ಹೆಗಲು ಸೇರಿಸಿ ಇವರ ಯಶಸ್ಸಿಗೆ ಕಾರಣರಾಗಿದ್ದು ರಂಗಭೂಮಿಯ ಎಲ್ಲಾ ಚಟುವಟಿಕೆಗಳಲ್ಲಿ ಕ್ರಿಯಾಶೀಲರಾಗಿದ್ದು ಅಭಿನಯ ನಾಟಕ ರಚನೆ ನಾಟಕ ನಿರ್ದೇಶನಗಳಲ್ಲಿ ತೊಡಗಿಸಿಕೊಂಡಿದ್ದಾರೆ.

ಅರವಿಂದ ಅವರದು 68ರ ಇಳಿಯ ವಯಸ್ಸಿನಲ್ಲಿಯೂ ಅತ್ಯಂತ ಚಟುವಟಿಕೆಯ ವ್ಯಕ್ತಿತ್ವ. ನಾವು ಬಿಟ್ಟು ಹೋಗುವ ಸಮಾಜದ, ದೇಶದ ಹೊರೆಯನ್ನು ಭಾವಿ ನಾಗರೀಕರಾಗಿರುವ ಮಕ್ಕಳು ತಾನೆ ಹೊರಬೇಕು ಎನ್ನುವ ಅರವಿಂದರು ಮಕ್ಕಳಲ್ಲಿ ಸಂಸ್ಕೃತಿ, ಸಂಸ್ಕಾರ, ಆತ್ಮ ವಿಶ್ವಾಸ ಸಾಹಿತ್ಯ ಸಜ್ಜುಗೊಳಿಸುವ, ನಿಟ್ಟಿನಲ್ಲಿಪ್ರತಿ ವರ್ಷ ಮಕ್ಕಳಿಗೆ ಎಪ್ರೀಲ್ ಮಾಹೆಯಲ್ಲಿ "ಸೃಜನಾ ಕಲಾ ಶಿಬಿರವನ್ನು" ಹಮ್ಮಿಕೊಂಡು ಮಕ್ಕಳಲ್ಲಿ ಕಲೆ, ಸಾಹಿತ್ಯ, ಸಂಸ್ಕೃತಿ, ಇತಿಹಾಸ ವಿಷಯಗಳನ್ನು ಮನಮುಟ್ಟುವುಂತೆ ತಿಳಿ ಹೇಳುವ ಅರವಿಂದರು ಜೀವನದಲ್ಲಿ ಎನೇ ಕಷ್ಟ ಬಂದರೂ ಎದುರಿಸುವ ಧೈರ್ಯ, ಸೌಂದರ್ಯ ಪ್ರಜ್ಞೆ, ಮಾತನಾಡುವ ಕಲೆ, ಏನೂ ಕೆಲಸಕೊಟ್ಟರೂ ಅದನ್ನು ಮಾಡುವೆನೆಂಬ ಕಿಚ್ಚು, ಆತ್ಮವಿಶ್ವಾಸ ಹೆಚ್ಚಿಸಿಕೊಳ್ಳುವ ಮೊದಲಾದ ಗುಣಗಳು ಎಳೆಯ ವಯಸ್ಸಿನಲ್ಲಿಯೇ ಮೈಗೂಡಿಸಿಕೊಳ್ಳುವ ತರಬೇತಿಯನ್ನು ಮಕ್ಕಳಿಗೆ ಶಿಬಿರದಲ್ಲಿ ನೀಡುವುದರೊಂದಿಗೆ ನಾಟಕ ಸ್ಪರ್ದೆಗಳಲ್ಲಿ ಸ್ಪರ್ಧಿಸುವಂತೆ ಮಕ್ಕಳನ್ನು ಹುರುದುಂಬಿಸಿ ತಾಲೀಮು ನೀಡುವುದಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದಾರೆ. ನಿಜವಾದ ವ್ಯಕ್ತಿತ್ವದ ವಿಕಸನವಾದರೆ ಅದೇ ನಿಜವಾದ ಶಿಕ್ಷಣವೆನ್ನುವುದು ಅವರ ಅಭಿಪ್ರಾಯ.

ರಂಗಕರ್ಮಿ ಡಾ.ಅರವಿಂದ ಕುಲಕರ್ಣಿ ಅವರು ರಂಗಭೂಮಿಗೆ ಸಲ್ಲಿಸಿದ ಸೇವೆ ಅಪಾರವಾಗಿದ್ದು ಧಾರವಾಡದ ಸ್ನೇಹ ಪ್ರತಿಷ್ಠಾನವು ಇವರ ರಂಗಭೂಮಿಯ ಜೀವಮಾನ ಸಾಧನೆಗಾಗಿ 22–23 ನೇ ಸಾಲಿನ "ಆಜೀವಮಾನ ಸಾಧನಾ ರಂಗ ಪ್ರಶಸ್ತಿ"ಯನ್ನು ನೀಡಿ ಗೌರವಿಸಿದೆ.

ನಾವು ನನ್ನದು ಎನ್ನುವುದು ನಶ್ವರ ಸ್ವಾರ್ಥ ಜೀವನಕ್ಕೆ ಬೆಲೆ ಇಲ್ಲ. ನಾವು ಎಷ್ಟು ದಿನ ಬದಿಕಿದೆವು ಅನ್ನುವುದಕ್ಕಿಂತ ಹೇಗೆ ಬದುಕಿದೆವು ಎನ್ನುವುದು ಮುಖ್ಯ. ಎನ್ನುವ ಅರವಿಂದರು ತಮಗೆ ಸಾಧ್ಯವಾದಾಗಲೆಲ್ಲ ವೃದ್ಧಾಶ್ರಮಗಳಿಗೆ ಹಾಗೂ ಅನಾಥಾಶ್ರಮಗಳಿಗೆ ದಂಪತಿಗಳಿಬ್ಬರು ಭೇಟಿ ಕೊಟ್ಟು ಅವರೊಂದಿಗೆ ಕಾಲ ಕಳೆದು ಬರುವ ಪರಿಪಾಟ ಇಟ್ಟುಕೊಂಡಿದ್ದಾರೆ. ಬಡ ವಿಧ್ಯಾರ್ಥಿಗಳಿಗೆ ಶಿಕ್ಷಣಕ್ಕಾಗಿ ಧನ ಸಹಾಯವನ್ನು ನೀಡುತ್ತಾ ಬಂದಿದ್ದಾರೆ.

ಆರೋಗ್ಯಕರ ಮನಸ್ಸುಳ್ಳ ಯುವ ಜನತೆಯನ್ನು ರೂಪಿಸುವದು ಪ್ರಸ್ತುತ ಸನ್ನಿವೇಶದಲ್ಲಿ ಅಗತ್ಯವಿದೆ ಅರವಿಂದರು ರಂಗಭೂಮಿಗೆ ದೊಡ್ಡ ಆಸ್ತಿ ಎಂದರೆ ತಪ್ಪಾಗುವುದಿಲ್ಲ. ಅವರ ಬದುಕಿನ ನಡೆಯಲ್ಲಿ ಹವ್ಯಾಸಿ ರಂಗಭೂಮಿಯ ಸಾಧನೆಯ ಹೆಜ್ಜೆಗಳನ್ನು ತಿಳಿಸುವ ಪ್ರಯತ್ನ ನನ್ನದು. ಹೀಗೆ ಇವರ ವ್ಯಕ್ತತ್ವ ಅನಾವರಣ ಮಾಡುತ್ತಾ ಹೋದಂತೆ ಮುಗಿಯುವದೇ ಇಲ್ಲ. ಇಂದಿನ ರಂಗಭೂಮಿಗೆ ಸಂಶೋಧನ ಗುಣವನ್ನು ಹೊಂದಿರುವ ಕಲಾವಿದರು ಬೇಕಾಗಿದ್ದಾರೆ. ಅಂದರೆ ರಂಗಭೂಮಿಯು ಇನ್ನಷ್ಟು ಗಟ್ಟಿಗೊಳ್ಳುತ್ತದೆ ಎಂದೆನಿಸುತ್ತದೆ.

ಹುಣಸೆ ಎಲೆಗಳು ತುಂಬಾ ಪ್ರಯೋಜನಕಾರಿ

ಹುಣಸೆ ಎಲೆಗಳು ನಂಜುನಿರೋಧಕ ಗುಣಗಳನ್ನು ಹೊಂದಿವೆ. ಎಲ್ಲರೂ ಹುಣಸೆಹಣ್ಣು ತಿನ್ನುತ್ತಾರೆ, ಆದರೆ ಅದರ ಎಲೆಗಳು ತುಂಬಾ ಪ್ರಯೋಜನಕಾರಿ. ಹುಣಸೆ ಎಲೆಗಳನ್ನು ಬಳಸಿ ಆರೋಗ್ಯ ಸಮಸ್ಯೆಗಳಿಂದ ಮುಕ್ತಿ ಪಡೆಯಬಹುದು. ಹಾಗಾದರೆ ಹುಣಸೆ ಎಲೆಗಳ ಪ್ರಯೋಜನವನ್ನು ತಿಳಿಯಲು ಮುಂದೆ ಓದಿ...

ಹುಣಸೆ ಎಲೆಗಳ ರಸವನ್ನು ತೆಗೆದು ಗಾಯಗಳ ಮೇಲೆ ಹಚ್ಚಿದರೆ ಗಾಯಗಳು ಬೇಗ ವಾಸಿಯಾಗುತ್ತದೆ. ಇದರ ಎಲೆಗಳ ರಸವು ಯಾವುದೇ ಸೋಂಕು ಮತ್ತು ಪರಾವಲಂಬಿ ಬೆಳವಣಿಗೆಯನ್ನು ತಡೆಯುತ್ತದೆ. ಇದಲ್ಲದೆ, ಇದು ವೇಗವಾಗಿ ಹೊಸ ಕೋಶಗಳನ್ನು ನಿರ್ಮಿಸುತ್ತದೆ.

ಈ 4 ಪದಾರ್ಥಗಳ ಸೇವನೆ ನಿಲ್ಲಿಸಿ, ಒಂದೇ ತಿಂಗಳಲ್ಲಿ ಕೊಲೆಸ್ಟ್ರಾಲ್ ಕಡಿಮೆಯಾಗುತ್ತೆ! ಹಾಲುಣಿಸುವ ಮಹಿಳೆಯರಿಗೆ ಹುಣಸೆ ಎಲೆಗಳ ರಸವನ್ನು ನೀಡಿದರೆ, ಅವರ ಹಾಲಿನ ಗುಣಮಟ್ಟ ಸುಧಾರಿಸುತ್ತದೆ ಎಂದು ಹೇಳಲಾಗುತ್ತದೆ.

ಹುಣಸೆ ಎಲೆಗಳ ರಸವನ್ನು ಸೇವಿಸುವುದರಿಂದ ಜನನಾಂಗದ ಸೋಂಕನ್ನು ತಡೆಗಟ್ಟುತ್ತದೆ ಮತ್ತು ಪೂರ್ವ ಅಸ್ತಿತ್ವದಲ್ಲಿರುವ ರೋಗಗಳ ಲಕ್ಷಣಗಳಿಂದ ಪರಿಹಾರವನ್ನು ನೀಡುತ್ತದೆ. ಹುಣಸೆ ಎಲೆಗಳಲ್ಲಿ ವಿಟಮಿನ್ ಸಿ ಸಮೃದ್ಧವಾಗಿದೆ, ಇದು ನಮ್ಮ

ದೇಹವನ್ನು ಯಾವುದೇ ಸೂಕ್ಷ್ಮಜೀವಿಗಳ ಸೋಂಕಿನಿಂದ ಸಂಪೂರ್ಣವಾಗಿ ದೂರವಿರಿಸುತ್ತದೆ. ಇದರಿಂದಾಗಿ ದೇಹವು ಆರೋಗ್ಯಕರವಾಗಿರುತ್ತದೆ.

ಬೆಳಗಿನ ಜಾವ ಒಂದು ಲೋಟ ಬಿಸಿನೀರು ಕುಡಿಯುವುದರಿಂದಾಗುವ ಪ್ರಯೋಜನಗಳೇನು ಗೊತ್ತಾ..?

ಹುಣಸೆ ಎಲೆಗಳ ರಸವನ್ನು ಸೇವಿಸುವುದರಿಂದ ದೇಹದ ಊತ ಮತ್ತು ಕೀಲು ನೋವು ನಿವಾರಣೆಯಾಗುತ್ತದೆ ಮತ್ತು ಇದರ ಬಳಕೆಯಿಂದ ಯಾವುದೇ ರೀತಿಯ ದೈಹಿಕ ಊತವನ್ನು ಕಡಿಮೆ ಮಾಡಬಹುದು. ಎಲೆಗಳ ಪರಿಣಾಮಕಾರಿತ್ವವನ್ನು ಹೆಚ್ಚಿಸಲು ಪಪ್ಪಾಯಿ, ಉಪ್ಪು ಮತ್ತು ನೀರನ್ನು ಎಲೆಗಳಿಗೆ ಸೇರಿಸಬಹುದು. ಆದರೆ ಹೆಚ್ಚು ಉಪ್ಪನ್ನು ಬಳಸಬೇಡಿ. ಹುಣಸೆ ಎಲೆಗಳ ರಸವು ದೇಹದಲ್ಲಿ ಉಂಟಾಗುವ ಅಲರ್ಜಿಯನ್ನು ಸಹ ತಡೆಯುತ್ತದೆ.

ಹಾಲು ಕಾಯಿಸುವಾಗ ಈ ತಪ್ಪುಗಳನ್ನು ಮಾಡಿದ್ರೆ ನಷ್ಟವಾಗುತ್ತೆ ಪೋಷಕಾಂಶ

ಹಸುವಿನ ಹಾಲು ಆರೋಗ್ಯಕ್ಕೆ ತುಂಬಾನೆ ಒಳ್ಳೆಯದು. ಇದರಲ್ಲಿರುವ ಅಗಾಧ ಪ್ರಮಾಣದ ವಿಟಾಮಿನ್ ಹಾಗೂ ಪೋಷಕಾಂಶಗಳು ದೇಹದಲ್ಲಿ ಶಕ್ತಿಯನ್ನ ಹೆಚ್ಚಿಸುತ್ತವೆ.

ಆದರೆ ಈ ಹಾಲನ್ನ ಕಾಯಿಸುವ ವೇಳೆ ನಾವೆಲ್ಲ ಒಂದು ಸಾಮಾನ್ಯ ತಪ್ಪನ್ನ ಮಾಡುತ್ತೇವೆ. ಇದರಿಂದಾಗಿ ಹಾಲಿನಲ್ಲಿರುವ ಎಲ್ಲಾ ಸತ್ವಗಳು ಮಾಯವಾಗುತ್ತೆ.

ಅನೇಕ ಮಹಿಳೆಯರು ಹಾಲನ್ನ ಪದೇ ಪದೇ ಕಾಯಿಸಿ ಇಡುತ್ತಾರೆ. ಬಹಳ ಹಿಂದಿನಿಂದ ಹಾಲನ್ನ ಕಡಿಮೆ ಉರಿಯಲ್ಲಿ ತುಂಬಾ ಹೊತ್ತು ಕುದಿಸಿದ್ರೆ ಅದು ಹಾಳೇ ಆಗಲ್ಲ ಎಂದು ಇದೇ ಪದ್ಧತಿ ನಡೆದುಕೊಂಡು ಬಂದಿದೆ. ಇನ್ನು ಕೆಲ ಮಹಿಳೆಯರು ಒಳ್ಳೆಯ ಕೆನೆ ಸಿಕ್ಕರೆ ತುಪ್ಪ ಮಾಡೋಕೆ ಅನುಕೂಲವಾಗುತ್ತೆ ಅಂತಾ ಹಾಲನ್ನ ಪದೇ ಪದೇ ಕಾಯಿಸುತ್ತಾ

ಶಾಸಕರು ತಾವು ಕೈಗೊಂಡ ಕಾಮಗಾರಿಗಳು ಅಭಿವೃದ್ಧಿ ಎಷ್ಟು? ಮಾಧ್ಯಮ ಮುಖಾಂತರ ಉತ್ತರಿಸಿ ಬಿಜೆಪಿ ಕಾರ್ಯಕರ್ತರು ಅಶಿಫ್ ಸೆಟ್ ಅವರಿಗೆ ಮನವಿ

ಬೆಳಗಾವಿ: ಭಾರತೀಯ ಜನತಾ ಪಾರ್ಟಿ ಬೆಳಗಾವಿ ಮಹಾನಗರ ಉತ್ತರ ಮಂಡಲ ವತಿಯಿಂದ ಉತ್ತರ ಮತಕ್ಷೇತ್ರದ ಕಾಂಗ್ರೆಸ್ ಶಾಸಕ ಅಸೀಫ್ ಸೇಟ್ ಅವರು ಕ್ಷೇತ್ರದ ಪ್ರಸ್ತುತ ಸಾಲಿನಲ್ಲಿ ತಂದಿರುವ ಅನುದಾನ ಸರ್ಕಾರದಿಂದ ಈ ಅವಧಿಯಲ್ಲಿ ಬಿಡುಗಡೆ ಮಾಡಿರುವ ಅನುದಾನ ಎಷ್ಟು ಹಾಗೂ ತಾವು ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳ ವಿವರ ಮತದಾರರಿಗೆ ಹಾಗೂ ಮಾಧ್ಯಮದವರಿಗೆ ಲಿಖಿತ ರೂಪದಲ್ಲಿ ಕೊಡಬೇಕೆಂದು ಮಂಡಲ ವತಿಯಿಂದ ಮನವಿ ಸಲ್ಲಿಸಿ ಬಿಜೆಪಿ ಕಾರ್ಯಕರ್ತರು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷರಾದ ಗೀತಾ ಸುತಾರ, ಪ್ರಧಾನ ಕಾರ್ಯದರ್ಶಿಗಳಾದ ಈರಯ್ಯಾ ಖೋತ, ಉತ್ತರ ಮಂಡಲ ಅಧ್ಯಕ್ಷರಾದ ವಿಜಯ ಕೊಡಗಾನೂರ, ಪ್ರಮುಖರಾದ ಡಾ। ರವಿ ಪಾಟೀಲ್, . ದಾದಾಗೌಡ ಬಿರಾದಾರ, . ಮಹಾಂತೇಶ ವಕ್ಕುಂದ, . ಶೀಲ್ಪಾ ಕೆಕರೆ . ಸವಿತಾ ಗುಡ್ಡಾಕಾಯು, ಮಂಡಲ ಪ್ರಧಾನ ಕಾರ್ಯದರ್ಶಿಗಳಾದ ಅಶೋಕ ಥೋರಾಟ, ವಿನೋದ ಲಂಗೋಟಿ, ಮಾಧ್ಯಮ ಸಂಚಾಲಕರಾದ ಶರದ ಪಾಟೀಲ್, ಸಾಮಾಜಿಕ ಜಾಲತಾಣ ಸಂಚಾಲಕರಾದ ಶ್ರೀ. ಕೇದಾರನಾಥ ಜೋರಾಪುರ, ಮಹಾನಗರ ಮತ್ತು ಮಂಡಲ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಶರಣ ಮಾದರ ಚನ್ನಯ್ಯ, ಮಾದರ ಧೂಳಯ್ಯ, ಢೋಹರ ಕಕ್ಕಯ್ಯ, ಸಮಗಾರ ಹರಳಯ್ಯ ಹಾಗೂ ಉರಿಲಿಂಗಪೆದ್ದಿಯವರ ಜಯಂತಿ ಉತ್ಸವ

ವಚನಕಾರರ ಸಾಮಾಜಿಕ ಕೊಡುಗೆಯನ್ನು ಆದರ್ಶಪ್ರಾಯವಾಗಿ ಅರಿತುಕೊಂಡು ಬದುಕಬೇಕು: ಗಂಗಾಧರ ದಿವಿಟರ

ಬೆಳಗಾವಿ: 12ನೇ ಶತಮಾನದಲ್ಲಿನ ಕಾಯಕ ಶರಣರಾದ ಮಾದರ ಚನ್ನಯ, ಮಾದರ ಧೂಳಯ್ಯ, ಡೋಹರ ಕಕ್ಕಯ್ಯ, ಸಮಾಗರ ಹರಳಯ್ಯ ಹಾಗೂ ಉರಿಲಿಂಗಪೆದ್ದಿಯರು ಮಹಾನ್ ವ್ಯಕ್ತಿಗಳು. ನಮ್ಮ ಸಮಾಜದ ಏಳಿಗೆಗಾಗಿ ಶ್ರಮಿಸಿ, ಯಾವುದೇ ಮೇಲು, ಕೀಳು ತಾರತಮ್ಯ ಇಲ್ಲದೆ ಸಮಾಜದ ಉದ್ಧಾರಕ್ಕಾಗಿ ಪರಿತಪಿಸಿದವರು. ಎಲ್ಲರೂ ಅವರ ವಚನ ಸಾಹಿತ್ಯಗಳನ್ನು ಅರಿತು ಬದುಕಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾ ನಿರ್ದೇಶಕ ಗಂಗಾಧರ ದಿವಿಟರ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆಯ ಸಂಯುಕ್ತ ಆಶ್ರಯದಲ್ಲಿ ಶನಿವಾರ (ಫೆ.10) ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ನಡೆದ ಶರಣ ಮಾದರ ಚನ್ನಯ್ಯ, ಮಾದರ ಧೂಳಯ್ಯ, ಢೋಹರ ಕಕ್ಕಯ್ಯ, ಸಮಗಾರ ಹರಳಯ್ಯ ಹಾಗೂ ಉರಿಲಿಂಗಪೆದ್ದಿಯವರ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಹಾಶರಣರ ವಚನ ಸಾಹಿತ್ಯದ ಕೊಡುಗೆಗಳನ್ನು ಆದರ್ಶವಾಗಿ ಇಟ್ಟುಕೊಂಡು ಅವರು ತೋರಿಸಿದ ದಾರಿಯಲ್ಲಿ ಬದುಕಬೇಕು. ಯುವ ಪೀಳಿಗೆಗೆ ಶರಣರ ಆಚಾರ ವಿಚಾರ, ಆದರ್ಶ, ತತ್ವ ಸಂಸ್ಕಾರವನ್ನು ಬೆಳೆಸಿಕೊಂಡು ಜೀವನದಲ್ಲಿ ಬದುಕಲು ಕಲಿಸಬೇಕು.

ನಮ್ಮ ವ್ಯಕ್ತಿತ್ವದಿಂದ ಸಮಾಜಕ್ಕೆ ಮಾದರಿಯಾಗಬೇಕು.

ಆದರೆ ಇತ್ತೀಚಿನ ದಿನಗಳಲ್ಲಿ ಜನರು ತಂತ್ರಜ್ಞಾನದ ಗುಲಾಮರಾಗಿದ್ದಾರೆ. ಒಳ್ಳೆಯ ಮಾಹಿತಿಗಳನ್ನು ಪಡೆದುಕೊಳ್ಳದೆ ವಂಚಿತರಾಗುತಿದ್ದಾರೆ. ಪ್ರತಿಯೊಬ್ಬರೂ ಶರಣರ ನಿಜ ಜೀವನದ ಜೀವನ ಚರಿತ್ರೆ ಓದುವ ಮೂಲಕ ಒಳ್ಳೆಯ ಸಂಸ್ಕಾರ ಬೆಳಸಿಕೊಳ್ಳಬೇಕು. ಅದೇ ರೀತಿಯಲ್ಲಿ ನಮ್ಮ ವ್ಯಕ್ತಿತ್ವವನ್ನು ಸುಧಾರಣೆ ಮಾಡಿಕೊಳ್ಳಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾ ನಿರ್ದೇಶಕ ಗಂಗಾಧರ ದಿವಿಟರ ಅವರು ಹೇಳಿದರು.

ಈ ವೇಳೆ ಉಪನ್ಯಾಸ ನೀಡಿದ ಲಿಂಗರಾಜ ಮಹಾವಿದ್ಯಾಲಯದ ಕನ್ನಡ ಪ್ರಾಧ್ಯಾಪಕರಾದ ಡಾ. ರೇಣುಕಾ ಕಠಾರಿ ಅವರು ಸಮಾಜದಲ್ಲಿರುವ ಜಾತಿ ಮತ ಮೂಢನಂಬಿಕೆಬಗಳನ್ನು ಹೋಗಲಾಡಿಬಸಲು ಶರಣ ಮಾದರ ಚನ್ನಯ್ಯ, ಮಾದರ ಧೂಳಯ್ಯ, ಢೋಹರ ಕಕ್ಕಯ್ಯ, ಸಮಗಾರ ಹರಳಯ್ಯ ಹಾಗೂ ಉರಿಲಿಂಗಪೆದ್ದಿಯವರ ಶ್ರಮಿಸಿದ್ದಾರೆ. ಸಮಾಜದಲ್ಲಿ ಸಮಾನತೆ, ಏಕತೆಯ ಬದಲಾವಣೆ ತರಲು ಶರಣರ ಆದರ್ಶಗಳನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು ಎಂದರು.

ಮಕ್ಕಳಿಗೆ ಶಿಕ್ಷಣ ನೀಡುವ ಮೂಲಕ ಸಮಾಜದ ಮುಖ್ಯವಾಹಿನಿಗೆ ತರಬೇಕು. ದೇಶ ಕಟ್ಟುವಲ್ಲಿ ಯುವ ಜನತೆಯು ಶಿವಶರಣರ ಆಚಾರ ವಿಚಾರ ಹಾಗೂ ಆದರ್ಶ ತತ್ವಗಳನ್ನು ಅಭ್ಯಾಸಿಸಬೇಕು ಎಂದು ಡಾ. ರೇಣುಕಾ ಕಠಾರಿ ಹೇಳಿದರು.

ವಿದ್ಯಾರ್ಥಿಗಳಿಗೆ ಸನ್ಮಾನ:

ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದ ಮಾದಾರ, ಡೋಹರ, ಸಮಗಾರ ಹಾಗೂ ಚಲುವಾದಿ ಸಮಾಜದ ವಿದ್ಯರ್ಥಿಗಳಿಗೆ ಸನ್ಮಾನ ಮಾಡಲಾಯಿತು.

ಸಮಾಜದ ಮುಖಂಡರಾದ ಮಲ್ಲೇಶ ಚೌಗುಲಾ, ರವಿ ಶಿಂಧೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಉಪನಿರ್ದೇಶಕರು ವಿದ್ಯಾವತಿ ಭಜಂತ್ರಿ, ವಿವಿಧ ಸಮಾಜದ ಮುಖಂಡರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಕುಡತಿನಿಯ ಎ.ಪ್ರಿಯಾಂಕಾಗೆ ಎಂ.ಎಸ್ಸಿ ರಸಾಯನಶಾಸ್ತ್ರ ವಿಭಾಗದಲ್ಲಿ ಪ್ರಥಮ ರ್‍ಯಾಂಕ್

ಬಳ್ಳಾರಿ: ಇಲ್ಲಿನ ವಿಜಯನಗರ ಕೃಷ್ಣದೇವರಾಯ ವಿಶ್ವ ವಿದ್ಯಾಲಯದ ಸ್ನಾತಕೋತ್ತರ ಪದವಿ ವಿಭಾಗದ ಫಲಿತಾಂಶ ಪ್ರಕಟವಾಗಿದ್ದು, ಎಂ. ಎಸ್ಸಿ ರಸಾಯನಶಾಸ್ತ್ರ ವಿಭಾಗದಲ್ಲಿ ಕುಡತಿನಿ ಗ್ರಾಮದ ಎ.ಪ್ರಿಯಾಂಕಾ ಅವರು ಪ್ರಥಮ ರ್‍ಯಾಂಕ್ ಪಡೆದಿದ್ದಾರೆ.

ವಿಶ್ವವಿದ್ಯಾಲಯದ ಸ್ನಾತಕೋತ್ತರ ಅಧ್ಯಯನ ಕೇಂದ್ರದಲ್ಲಿ ಅಧ್ಯಯನ ಮಾಡಿರುವ ಪ್ರಿಯಾಂಕ ಅವರು ಎರಡು ವರ್ಷದ ಎಂ.ಎಸ್ಸಿ ಪದವಿಯ ಎಲ್ಲಾ ನಾಲ್ಕು ಸೆಮಿಸ್ಟರ್ಗಳಿಂದ 2400 ಅಂಕಗಳಿಗೆ 1964 ಅಂಕ ಗಳಿಸಿದ್ದಾರೆ.

ಶೇ.81.83 ಪ್ರತಿಶತ ಸಾಧನೆ ತೋರಿರುವ ಪ್ರಿಯಾಂಕ ಅವರಿಗೆ ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥರು ಅಭಿನಂಧನೆ ಸಲ್ಲಿಸಿದ್ದಾರೆ. ಮಗಳ ಸಾಧನೆ ಕುರಿತು ತಂದೆ ಅಕ್ಕಿ ಜಡೆಪ್ಪ ಹಾಗೂ ತಾಯಿ ರತ್ನಮ್ಮ ಸಂತಸ ವ್ಯಕ್ತಪಡಿಸಿದ್ದಾರೆ. ಮದುವೆಯ ನಂತರವೂ ನನ್ನ ವಿದ್ಯಾಭ್ಯಾಸ ಮುಂದುವರೆಸುವ ಒತ್ತಾಸೆಗೆ ಪತಿ ಮಂಜುನಾಥ ಕೆ. ಎನ್ ಬೆಂಬಲವಾಗಿ ನಿಂತಿದ್ದಾರೆ. ತಂದೆ, ತಾಯಿ, ಪತಿ ಅವರ ಪ್ರೇತ್ಸಾಹದಿಂದಲೇ ಉತ್ತಮ ಅಂಕ ಗಳಿಸಲು ಸಾಧ್ಯವಾಯಿತು ಎಂದು ಪ್ರಿಯಾಂಕ ಅವರು ತಿಳಿಸಿದ್ದಾರೆ.

ಜೀತ ಪದ್ಧತಿ ನಿರ್ಮೂಲನೆ ಅಗತ್ಯ: ನ್ಯಾ.ರಾಜೇಶ್ ಎನ್.ಹೊಸಮನಿ

ಬಳ್ಳಾರಿ: ಜೀತಕ್ಕಾಗಿ ವ್ಯಕ್ತಿ ಹಾಗೂ ಮಕ್ಕಳನ್ನು ದುಡಿಸಿಕೊಳ್ಳುವುದು ಅಮಾನವೀಯ ಮತ್ತು ಕ್ರಿಮಿನಲ್ ಅಪರಾಧವಾಗಿದ್ದು, ಜೀತ ಪದ್ಧತಿ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸುವ ಮೂಲಕ ನಿರ್ಮೂಲನೆ ಅಗತ್ಯವಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯರು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಾರ್ಮಿಕ ಇಲಾಖೆ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಬಾಲಕಾರ್ಮಿಕ ಯೋಜನೆ ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಲಾಗಿದ್ದ ಜೀತ ಪದ್ಧತಿ ನಿರ್ಮೂಲನಾ ದಿನಾಚರಣೆ ಕಾರ್ಯಕ್ರಮವನ್ನು ಪ್ರತಿಜ್ಞೆ ವಿಧಿ ಸ್ವೀಕರಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಆರ್ಥಿಕ ಸಮಸ್ಯೆಯಿಂದಾಗಿ ಹಾಗೂ ಕನಿಷ್ಟ ಕೂಲಿ ಇಲ್ಲದೆ ಜೀತದಾಳುಗಳಾಗಿ ಇನ್ನೊಬ್ಬರ ಕೈ ಕೆಳಗೆ ಜೀತ ಕೆಲಸ ಮಾಡುತ್ತಾರೆ. ಈ ಪದ್ಧತಿಯು ಹಿಂದಿನ ಕಾಲದಲ್ಲಿ ಪಾಶ್ಚಾತ್ಯ ರಾಷ್ಟ್ರಗಳಲ್ಲಿ ಹೆಚ್ಚಾಗಿ ಕಂಡುಬರುತ್ತಿತ್ತು. 1976 ರಲ್ಲಿ ಜೀತ ಪದ್ಧತಿ ನಿಷೇಧ ಕಾಯ್ದೆ ಜಾರಿಗೆ ತರುವ ಮೂಲಕ ಜೀತ ಪದ್ಧತಿಯನ್ನು ಕೊನೆಗಾಣಿಸುತ್ತ ಬರಲಾಯಿತು ಎಂದರು.

ಜೀತದಾಳುಗಳನ್ನು ಗುರುತಿಸಿ ಅವರಿಗೆ ಪುನರ್ವಸತಿ ಹಾಗೂ ಸರ್ಕಾರದ ಇತರ ಸೌಲಭ್ಯ ಒದಗಿಸುವ ಮೂಲಕ ಮುಖ್ಯವಾಹಿನಿಗೆ ತರುವ ಜವಾಬ್ದಾರಿ ಅಧಿಕಾರಿಗಳ ಮತ್ತು ನಮ್ಮೆಲ್ಲರದ್ದಾಗಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಈಗಲೂ ಜೀತಕಾರ್ಮಿಕ ಪದ್ಧತಿ ಪ್ರಕರಣಗಳು ಕಂಡುಬರುತ್ತಿವೆ. ಸಾರ್ವಜನಿಕರಲ್ಲಿ ಈ ಪದ್ಧತಿ ಕುರಿತು ಹೆಚ್ಚು ಅರಿವು ಮೂಡಿಸುವ ಕೆಲಸವಾಗಬೇಕಿದೆ. ಈ ನಿಟ್ಟಿನಲ್ಲಿ ಪ್ರತಿ ವರ್ಷ ಫೆ.9 ರಂದು ಜೀತ ಪದ್ಧತಿ ನಿರ್ಮೂಲನಾ ದಿನಾಚರಣೆಯನ್ನು ಆಚರಿಸಲಾಗುತ್ತದೆ ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್ ಅವರು ಅಧ್ಯಕ್ಷತೆ ಮಾತನಾಡಿ, ಜೀತ ಪದ್ಧತಿಯು ಸಮಾಜದಲ್ಲಿ ಇರುವಂತಹ ಅನಿಷ್ಠ ಪದ್ಧತಿಯಾಗಿದೆ. ನಾವೆಲ್ಲರೂ ಸಮಾನತೆ ಮತ್ತು ಸ್ವಾತಂತ್ರ್ಯತೆಯಿಂದ ಬದುಕಲು ಸಂವಿಧಾನವು ಹಕ್ಕುಗಳನ್ನು ನೀಡಿದೆ. ಇನ್ನೊಬ್ಬರನ್ನು ಶೋಷಿಸಿ ಬದುಕಲು ಅವಕಾಶವಿಲ್ಲ ಎಂದು ತಿಳಿಸಿದರು.

ಕಷ್ಟದಲ್ಲಿರುವ ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು. ಅನೇಕ ಸಾಮಾಜಿಕ ಅನಿಷ್ಠಗಳಂತೆ ಜೀತ ಪದ್ಧತಿಯೂ ಅನಿಷ್ಠ ಪದ್ಧತಿಯಾಗಿದೆ. ಇದನ್ನು ಹೋಗಲಾಡಿಸುವ ಜವಾಬ್ದಾರಿ ಸಮಾಜದ ಪ್ರತಿಯೊಬ್ಬರ ಮೇಲಿದೆ ಎಂದು ಅಭಿಪ್ರಾಯ ಪಟ್ಟರು.

ಕಾರ್ಯಕ್ರಮದಲ್ಲಿ ಜಿಲ್ಲಾವಾರು ಜೀತ ಕಾರ್ಮಿಕರ ಮಾಹಿತಿಯನ್ನೊಳಗೊಂಡ ವರದಿಯನ್ನು ಬಿಡುಗಡೆ ಮಾಡಲಾಯಿತು.

ಜನ ಜಾಗೃತಿ ಜಾಥಾ:

ಜೀತ ಪದ್ಧತಿ ದಿನಾಚರಣೆಯ ಅಂಗವಾಗಿ ಜಿಲ್ಲಾಧಿಕಾರಿಗಳ ಕಚೇರಿ ಆವರಣದಿಂದ ಹಮ್ಮಿಕೊಂಡಿದ್ದ ಜನ ಜಾಗೃತಿ ಜಾಥಾಗೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯರು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನಿ ಮತ್ತು ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್ ಅವರು ಜೊತೆಗೂಡಿ ಹಸಿರು ನಿಶಾನೆ ತೋರಿಸುವುದರ ಮೂಲಕ ಚಾಲನೆ ನೀಡಿದರು.

ಕೆ.ಎಸ್ ಈಶ್ವರಪ್ಪ ವಿರುದ್ಧ ದೂರು ದಾಖಲು

ಬೆಂಗಳೂರು: ಗುಂಡಿಕ್ಕಿ ಕೊಲ್ಲುವ ಕಾನೂನು ತನ್ನಿ ಎಂದು ಹೇಳಿಕೆ ನೀಡಿದ ಮಾಜಿ ಸಚಿವ ಕೆ.ಎಸ್. ಈಶ್ವರಪ್ಪ ವಿರುದ್ಧ ಮತ್ತೊಂದು ದೂರು ದಾಖಲಾಗಿದೆ. ಕೆ.ಎಸ್ ಈಶ್ವರಪ್ಪ ವಿರುದ್ಧ ಯುವ ಕಾಂಗ್ರೆಸ್ ಅಧ್ಯಕ್ಷ ಶಶಾಂಕ್ ಹಾಗೂ ಸಂಜಯ್ ಅವರು ಯಶವಂತಪುರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ದೇಶ ವಿಭಜನೆ ಹೇಳಿಕೆ ನೀಡುವವರನ್ನು ಗುಂಡಿಕ್ಕಿ ಕೊಲ್ಲುವ ಕಾನೂನು ತರಬೇಕು ಎಂದು ಹೇಳಿಕೆ ನೀಡಿರುವ ಬಿಜೆಪಿ ಹಿರಿಯ ಮುಖಂಡ ಕೆ. ಎಸ್. ಈಶ್ವರಪ್ಪ ವಿರುದ್ಧ ಎಫ್ ಐಆರ್ ದಾಖಲಾಗಿತ್ತು. ಇದೀಗ ಮತ್ತೊಂದು ದೂರು ದಾಖಲಾಗಿದೆ.

ದರಪಟ್ಟಿ ಆಹ್ವಾನ

ಧಾರವಾಡ: ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆ ಕಛೇರಿ ಉಪಯೋಗಕ್ಕಾಗಿ ಮಾಸಿಕ ಬಾಡಿಗೆ ಆಧಾರದ 2024–25 ನೇ ಸಾಲಿಗೆ ಒಂದು ವರ್ಷದ ಅವಧಿಗೆ ವಾಹನ ಸೌಲಭ್ಯವನ್ನು ಒದಗಿಸಲು ಸ್ಥಳೀಯ ಟ್ರಾವೆಲ್ ಏಜೆನ್ಸಿಯವರಿಂದ ದರಪಟ್ಟಿಯನ್ನು ಫೆ.13, 2024ರ ಸಂಜೆ 4 ಗಂಟೆಯೊಳಗಾಗಿ ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆ ಕಛೇರಿಗೆ ಸಲ್ಲಿಸುವಂತೆ ಆಹ್ವಾನಿಸಲಾಗಿದೆ.

2020 ರ ನಂತರ ಬುಲೇರೋ ಟೋಯೋಟಾ, ಇಡಿಯೋಸ್, ಟಾಟಾಸುಮೋ ಗೊಲ್ಡ್, ಎರಟಿಗಾ ಇತ್ಯಾದಿ ವಾಹನಗಳಿಗೆ ಆದ್ಯತೆ ನೀಡಲಾಗುವುದು. ಆಸಕ್ತಿವುಳ್ಳ ಟ್ರಾವೆಲ್ ಏಜೆನ್ಸಿಯವರು ದರಪಟ್ಟಿಗಳನ್ನು ನೀಡಲು ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳು, ಮಿನಿವಿಧಾನ ಸೌಧ, 2ನೇ ಮಹಡಿ, ಕೊಠಡಿ ಸಂಖ್ಯೆ: 303, ಧಾರವಾಡ ಕಛೇರಿಯನ್ನು ಹಾಗೂ ದೂರವಾಣಿ ಸಂಖ್ಯೆ: 0836–2447022ಯನ್ನು ಸಂಪರ್ಕಿಸುವುದು.

ರಸ್ತೆ ದಾಟುವಾಗ ಅಪರಿಚಿತ ವಾಹನ ಡಿಕ್ಕಿ: ವೃದ್ಧೆ ಸಾವು

ಬೆಂಗಳೂರು: ಹಿಟ್ ಅಂಡ್ ರನ್ಗೆ ಪಾದಚಾರಿ ವೃದ್ಧೆ ಬಲಿಯಾಗಿರುವ ಘಟನೆ ನಗರದ ಮಹಾಲಕ್ಷ್ಮಿ ಲೇಔಟ್ ಮೆಟ್ರೋ ನಿಲ್ದಾಣದ ಬಳಿ ನಡೆದಿದೆ.

ಮಹಾಲಕ್ಷ್ಮಿ ಲೇಔಟ್ ನಿವಾಸಿ ಆಶಾರಾಣಿ (60) ಮೃತ ದುರ್ದೈವಿ. ಬೆಳಗಿನ ಜಾವ 5:40ರ ಸುಮಾರಿಗೆ ಶ್ರೀರಂಗಪಟ್ಟಣಕ್ಕೆ ಹೋಗಲೆಂದು ವೃದ್ಧೆ ಮನೆಯಿಂದ ಬಸ್ ನಿಲ್ದಾಣಕ್ಕೆ ತೆರಳುತ್ತಿದ್ದರು. ಈ ವೇಳೆ ಮಹಾಲಕ್ಷ್ಮಿ ಲೇಔಟ್ ಮೆಟ್ರೋ ನಿಲ್ದಾಣ ಬಳಿ ರಸ್ತೆ ದಾಟುವಾಗ ಅಪರಿಚಿತ ವಾಹನವೊಂದು ಹಿಂಬದಿಯಿಂದ ಡಿಕ್ಕಿ ಹೊಡೆದು ಹಾಗೇ ಹೋಗಿದೆ.

ವಾಹನ ಡಿಕ್ಕಿಯಾದ ಪರಿಣಾಮ ಸ್ಥಳದಲ್ಲೇ ವೃದ್ಧೆ ಮೃತಪಟ್ಟಿದ್ದಾರೆ. ರಾಜಾಜಿನಗರದ ಫೋರ್ಟಿಸ್ ಆಸ್ಪತ್ರೆಗೆ ಮೃತದೇಹ ರವಾನಿಸಲಾಗಿದ್ದು, ಸ್ಥಳಕ್ಕೆ ಸಂಚಾರಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮಲ್ಲೇಶ್ವರಂ ಸಂಚಾರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ. ಪೊಲೀಸರ ತನಿಖೆಯಿಂದ ಡಿಕ್ಕಿಯಾದ ವಾಹನ ಯಾವುದೆಂದು ತಿಳಿದು ಬರಬೇಕಿದೆ.

ಬಿಜೆಪಿ ಅಧಿಕಾರಕ್ಕೆ ತರಲು ಕಾರ್ಯಕರ್ತರು ಶಿಸ್ತಿನಿಂದ ಕೆಲಸ ಮಾಡಿ: ಶಾಸಕ ಬಾಲಚಂದ್ರ ಜಾರಕಿಹೊಳಿ

ಮೂಡಲಗಿ: ಬರುವ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಮತ್ತೊಮ್ಮೆ ಅಧಿಕಾರಕ್ಕೆ ಬರಲು ಕಾರ್ಯಕರ್ತರು ಪ್ರತಿ ಮತಗಟ್ಟೆಗಳಲ್ಲಿ ಸರ್ಕಾರದ ಯೋಜನೆಗಳನ್ನು ಮತದಾರರಿಗೆ ಮನವರಿಕೆ ಮಾಡಿಕೊಡುವ ಕಾರ್ಯವನ್ನು ಅತಿ ಶಿಸ್ತಿನಿಂದ ಮಾಡುವಂತೆ ಶಾಸಕ ಮತ್ತು ಕ.ಹಾ.ಮ. ನಿರ್ದೇಶಕ ಬಾಲಚಂದ್ರ ಜಾರಕಿಹೊಳಿ ಅವರು ಕಾರ್ಯಕರ್ತರಿಗೆ ಕರೆ ನೀಡಿದರು.

ಶನಿವಾರದಂದು ತಾಲೂಕಿನ ತುಕ್ಕಾನಟ್ಟಿ ಗ್ರಾಮದಲ್ಲಿ ಬಿಜೆಪಿ ಅರಭಾವಿ ಮಂಡಲ ಏರ್ಪಡಿಸಿದ್ದ "ಗಾಂವ–ಚಲೋ ಅಭಿಯಾನ"ದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕೇಂದ್ರ ಸರ್ಕಾರದ ಜನರಿಗೆ ಹತ್ತಿರವಾಗುವ ಯೋಜನೆಗಳನ್ನು ಜನರ ಮನೆ ಬಾಗಿಲಿಗೆ ಪ್ರಚಾರ ಪಡಿಸಲು ಅವರು ಕೋರಿದರು.

ನರೇಂದ್ರ ಮೋದಿಯವರನ್ನು ಮತ್ತೋಮ್ಮೆ ಈ ದೇಶದ ಪ್ರಧಾನ ಮಂತ್ರಿಯನ್ನಾಗಿ ಮಾಡುವ ಸಂಕಲ್ಪ ನಮ್ಮದಾಗಿದೆ. ಈ ನಿಟ್ಟಿನಲ್ಲಿ ಗಾಂವ–ಚಲೋ ಅಭಿಯಾನವನ್ನು ಪ್ರತಿ ಮತಗಟ್ಟೆ ಮಟ್ಟದಲ್ಲಿ ಆಯೋಜನೆ ಮಾಡಲಾಗಿದೆ. ಮತಗಟ್ಟೆಗಳ ಪ್ರಮುಖರು ಪ್ರತಿ ಮತಗಟ್ಟೆಗಳ ಮನೆಗಳಿಗೆ ತೆರಳಿ ಕೇಂದ್ರ ಸರ್ಕಾರದ ಸಾಧನೆಗಳನ್ನು ತಿಳಿಸಬೇಕು. ನಮ್ಮ ಪಕ್ಷವು ಅತಿ ಶಿಸ್ತು, ಬದ್ಧತೆಯಿಂದ ಕಾರ್ಯ ನಿರ್ವಹಿಸುತ್ತಿದೆ. ಜೊತೆಗೆ ಇಡೀ ವಿಶ್ವದಲ್ಲಿಯೇ ಬಿಜೆಪಿ ಅತಿ ಹೆಚ್ಚು ಪ್ರಾಥಮಿಕ ಸದಸ್ಯರನ್ನು ಹೊಂದುವ ಮೂಲಕ ದೊಡ್ಡ ಪಕ್ಷವಾಗಿ ಗುರುತಿಸಿಕೊಂಡಿದೆ. ಪ್ರಧಾನಿ ನರೇಂದ್ರ ಮೋದಿ ಅವರ ಸಮರ್ಥ ಆಡಳಿತದಲ್ಲಿ ಪ್ರಪಂಚದಲ್ಲಿ ಬಲಿಷ್ಠ ಭಾರತವಾಗುತ್ತಿದೆ. ಇದಕ್ಕೆ ಮೋದಿಯವರು ಹಮ್ಮಿಕೊಂಡಿರುವ ಜನಪರ ಹಾಗೂ ಉತ್ತಮ ಯೋಜನೆಗಳೇ ಕಾರಣವೆಂದು ಹೇಳಿದರು.

ಪ್ರತಿ ಮತಗಟ್ಟೆಗಳಲ್ಲಿ ಕಾರ್ಯಕರ್ತರು ಹುಮ್ಮಸ್ಸ

ಕ್ಯೂ.ಆರ್ ಕೋಡ್ ಬಳಸಿ ಟಿಕೇಟ್ ನೀಡುವ ವ್ಯವಸ್ಥೆಯನ್ನು ಜಾರಿ

ಧಾರವಾಡ: ಫೆಬ್ರವರಿ 8, 2024 ರಿಂದ ಜಾರಿಗೆ ಬರುವಂತೆ ವಾ.ಕ.ರ.ಸಾ ಸಂಸ್ಥೆಯ ಧಾರವಾಡ ಘಟಕದ ಅನುಸೂಚಿಗಳ ವಾಹನಗಳಲ್ಲಿ ಪ್ರಯಾಣಿಸುವ ಪ್ರಯಾಣಿಕರಿಗೆ ಚಿಲ್ಲರೆ ಸಮಸ್ಯೆ ನೀಗಿಸುವ ಹಾಗೂ ಡಿಜಿಟಲ್ ಪೇಮೆಂಟ್ ಪ್ರೋತ್ಸಾಹಿಸಿ ಸಮಯ ಉಳಿತಾಯ ಮಾಡುವ ಉದ್ದೇಶದಿಂದ ಯು.ಪಿ.ಆಯ್ ಮುಖಾಂತರ ಕ್ಯೂ.ಆರ್ ಕೋಡ್ ಬಳಸಿ ಟಿಕೇಟ್ ನೀಡುವ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ. ಮುಂಬರುವ ಕೆಲವೇ ದಿನಗಳಲ್ಲಿ ವಿಭಾಗದ ವ್ಯಾಪ್ತಿಯ ಘಟಕಗಳಾದ ಸವದತ್ತಿ, ರಾಮದುರ್ಗ, ಹಳಿಯಾಳ, ದಾಂಡೇಲಿಯಲ್ಲಿಯೂ ಸಹ ಈ ವ್ಯವಸ್ಥೆ ಜಾರಿಯಾಗುತ್ತದೆ. ಸದರಿ ವ್ಯವಸ್ಥೆಯನ್ನು ಅತೀ ಹೆಚ್ಚಿನ ಸಾರ್ವಜನಿಕ ಪ್ರಯಾಣಿಕರು ಉಪಯೋಗಿಸಿಕೊಳ್ಳುವಚಿತೆ ವಾ.ಕ.ರ.ಸಾ.ಸಂಸ್ಥೆ.ಧಾರವಾಡ (ಗ್ರಾ)ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿ ಶಶಿಧರ ಚನ್ನಪ್ಪಗೌಡರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿದ್ಯಾರ್ಥಿಗಳು ವೃತ್ತಿ ಶಿಕ್ಷಣದತ್ತ ಹೆಚ್ಚಿನ ಗಮನ ನೀಡಬೇಕು: ಪ್ರೊ.ದೇಶಪಾಂಡೆ

ಬೆಳಗಾವಿ: ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ವೃತ್ತಿ ಶಿಕ್ಷಣದತ್ತ ಹೆಚ್ಚಿನ ಗಮನ ನೀಡಬೇಕೆಂದು ಬಾಗಲಕೋಟ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಆನಂದ ದೇಶಪಾಂಡೆ ಅವರು ಇಂದಿಲ್ಲಿ ಹೇಳಿದರು.

ಜೈನ ಇಂಟರ್‌ನ್ಯಾಷನಲ್ ಟ್ರೆಡ ಆರ್ಗನೈಝೇಶನ ಜಿತೋ ಸಂಸ್ಥೆಯ ವತಿಯಿಂದ ಅಂಗಡಿ ಮಹಾವಿದ್ಯಾಲದಲ್ಲಿ ಹಮ್ಮಿಕೊಳ್ಳಲಾಗಿದ್ದ ಎಸ್.ಎಸ.ಎಲ್.ಸಿ. ವಿದ್ಯಾರ್ಥಿಗಳಿಗೆ ಏರ್ಪಡಿಸಲಾದ ವೃತ್ತಿ ಶಿಕ್ಷಣದ ಮಾರ್ಗದರ್ಶನದ 11 ನೇ ಆವೃತ್ತಿಯ ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇಂದಿನ ಯುವ ಪೀಳಿಗೆಗೆ ಕಲಿಕೆಗಾಗಿ ಸಾಕಷ್ಟು ಅವಕಾಶಗಳಿವೆ. ಗೂಗಲ ಮೂಲಕ ಎಲ್ಲವನ್ನು ಕ್ಷಣಾರ್ಧದಲ್ಲಿ ಮಾಹಿತಿ ಪಡೆದುಕೊಳ್ಳಬಹುದು. ಇದರಿಂದ ಹೆಚ್ಚಿನ ಜ್ಞಾನಾರ್ಜನೆ ಆಗುತ್ತದೆ. ಈ ಜ್ಞಾನಾರ್ಜನೆಯೆ ಕೆಲವೊಮ್ಮೆ ವಿದ್ಯಾರ್ಥಿಗಳಿಗೆ ಹಿನ್ನಡೆಯನ್ನುಂಟು ಮಾಡುತ್ತದೆ. ಹಾಗಾಗಿ ಅನುಭವಸ್ಥರು ಮತ್ತು ನಿರಂತರ ಕಲಿಕೆಯ ಮೂಲಕ ನಿರ್ಧಿಷ್ಟವಾದ ಶೀಕ್ಷಣವನ್ನು ಪಡೆದುಕೊಳ್ಳಲು ಮುಂದಾಗಬೇಕೆಂದು ಅವರು ಹೇಳಿದರು.

ಗಣಿತ ಶಾಸ್ತ್ರದಲ್ಲಿ ಇಡಿ ವಿಶ್ವಕ್ಕೆ ಶೂನ್ಯವನ್ನು ಪರಿಚಯಿಸಿದ್ದು ಭಾರತ ದೇಶ. ಆದರೆ ಇದು ಭಾರತದಲ್ಲಿಯೇ ಬೇರೆ ದೇಶಗಳ ಗಣಿತವನ್ನು ಕಲಿಯಲಾಗುತ್ತದೆ. ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಚಟುವಟಿಕೆಗಳು ಇರಬೇಕು. ಇದರಿಂದ ಹೆಚ್ಚಿನ ಕಲಿಕೆಗೆ ಅನುಕೂಲವಾಗುತ್ತದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಭಾರತೀಯ ನಾಗರಿಕ ಸೇವೆಗಳ ಕುರಿತು ಉಪನ್ಯಾಸ ನೀಡಿದ ನಿವೃತ್ತ ಪ್ರಾದೇಶಿಕ ಆಯುಕ್ತರಾದ ಎಂ.ಜಿ.ಹಿರೇಮಠ ಅವರು ಭಾರತೀಯ ನಾಗರಿಕ ಸೇವೆ ಇದೊಂದು ಅತ್ಯುನ್ನತ ಸೇವೆಯಾಗಿದೆ. ಜಿಲ್ಲಾಧಿಕಾರಿ, ಜಿಲ್ಲಾ ಪೋಲಿಸ ವರಿಷ್ಠಾಧಿಕಾರಿ ಸೇರಿದಂತೆ ಇನ್ನೂ ಹತ್ತು ಹಲವಾರು ಹುದ್ದೇಗಳನ್ನು ಅಲಂಕರಿಸಲು ವಿಪುಲ ಅವಕಾಶಗಳಿವೆ. ಈ ಅವಕಾಶವನ್ನು ಗಿಟ್ಟಿಸಿಕೊಳ್ಳಲು ನಿಮ್ಮಲ್ಲಿ ಮನೋಸ್ಥೈರ್ಯ ಗಟ್ಟಿಯಾಗಿರಬೇಕು. ನಿರ್ಧಿಷ್ಟ ಗುರಿಯನ್ನು ತಲುಪುವ ಛಲ ಇರಬೇಕು.ನಿರಂತರ ಅಧ್ಯಯನ ಮತ್ತು ಪ್ರತಿದಿನ ಪತ್ರಿಕೆ ಓದುವುದನ್ನು ರೂಢಿಸಿಕೊಳ್ಳಬೇಕು. ಆತ್ಮವಿಶ್ವಾಸದಿಂದ ಮುನ್ನಡೆಯುತೇನೆಂಬ ಎದೆಗಾರಿಕೆ ಇರಬೇಕು. ನನಗೇನು ಬರುವುದಿಲ್ಲ ಎಂದು ಹೆದರಿಕೆಯನ್ನು ಮನಸ್ಸಿನಿಂದ ತೆಗೆದು ಹಾಕಿ ಗಟ್ಟಿ ನಿರ್ಧಾರದಿಂದ ಮುನ್ನಡೆದರೆ ಯಶಸ್ಸು ಖಂಡಿತ ಎಂದು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು. ಕಾರ್ಯಕ್ರಮದಲ್ಲಿ ಡಾ.ವೀಣಾ ದೇಸಾಯಿ ಕರ್ಚಿ , ಅಂಜಲಿ ಪಂಡಿತ, ಹಗೂ ತೇಜಸ ಕೋಳೆಕರ ಅವರು ವಿದ್ಯಾರ್ಥಿಗಳಿಗೆ ವಿವಿಧ ವಿಷಯಗಳ ಕುರಿತು ಮಾರ್ಗದರ್ಶನ ಮಾಡಿದರು. ಸಮಾರಂಭದಲ್ಲಿ ಜಿತೋ ಚೇರಮನ್ ವೀರಧವಲ ಉಪಾಧ್ಯೆ ಅತಿಥಿಗಳನ್ನು ಸ್ವಾಗತಿಸಿದರು. ಕಾರ್ಯಕ್ರಮ ಸಂಯೋಜಕ ರೌಣಕ ಶೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯದರ್ಶಿ ಅಶೋಕ ಕಠಾರಿಯಾ ವಂದಿಸಿದರು. ಅಂಕಿತ ಖೋಡಾ ಕಾರ್ಯಕ್ರಮ ನಿರೂಪಿಸಿದರು. ಈ ಕಾರ್ಯಕ್ರಮದಲ್ಲಿ ಸುಮಾರು 400 ಕ್ಕು ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಮಹೇಂದ್ರ ಪರಮಾರ ಸೇರಿದಂತೆ ಜಿತೊ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಹೋಮಿಯೋ ಹೀಲಿಂಗ್ ವಾಯೇಜ್, ಎ ಜರ್ನಿ ಟು ಎಕ್ಸಲೆನ್ಸ್ ರಾಷ್ಟ್ರೀಯ ಹೋಮಿಯೋಪತಿ ಸಮ್ಮೇಳನ-2024

ಬೆಳಗಾವಿ: ಭಾರತದಲ್ಲಿ ಎರಡನೇ ಅತೀ ದೊಡ್ಡ ವೈದ್ಯವಿಜ್ಞಾನವಾಗಿರುವ ಹೋಮಿಯೋಪತಿಯು ಅಧಿಕ ರಕ್ತದೊತ್ತಡ, ಮಧುಮೇಹ, ಪಾರ್ಶ್ವವಾಯು ಮತ್ತು ಕ್ಯಾನ್ಸರ್‌ಗಳಂತಹ ಸಾಂಕ್ರಾಮಿಕವಲ್ಲದ ಕಾಯಿಲೆಗಳಿಗೆ ಚಿಕಿತ್ಸೆ ನೀಡುವ ಪ್ರಬಲವಾದ ಔಷಧಗಳನ್ನು ಹೊಂದಿದೆ. ಪ್ರತಿಕೂಲ ಪರಿಣಾಮಗಳಿಲ್ಲದೇ ಉತ್ತಮ ಫಲಿತಾಂಶವನ್ನು ನೀಡುತ್ತದೆ ಎಂದು ನವದೆಹಲಿಯ ಎಂಎಆರ್‌ಬಿ(ಮೆಡಿಕಲ್ ಅಸೆಸ್ಮೆಂಟ ರೇಟಿಂಗ ಬೋರ್ಡ ಫಾರ ಹೊಮಿಯೊಪಥಿ) ಯ ಅಧ್ಯಕ್ಷರಾದ ಡಾ. ಕೆ. ಆರ್ ಜನಾರ್ಧನನ ನಾಯರ ಅವರಿಂದಿಲ್ಲಿ ಹೇಳಿದರು.

ಕೆಎಲ್ಇ ಅಕಾಡೆಮಿ ಆಫ್ ಹೈಯರ ಎಜ್ಯುಕೇಶನ್ ಆ್ಯಂಡ ರಿಸಚನ ಕೆಎಲ್ಇ ಹೊಮಿಯೋಪಥಿ ಮೆಡಿಕಲ್ ಕಾಲೇಜ ಮತ್ತು ಆಸ್ಪತ್ರೆ, ಕರ್ನಾಟಕ ಕ್ವಾಲಿಫೈಡ್ ಹೋಮಿಯೋಪತಿ ಅಸೋಸಿಯೇಶನ್‌ನ ಇವುಗಳ ಸಂಯುಕ್ತಾಶ್ರಯದಲ್ಲಿ ಹೋಮಿಯೋ ಹೀಲಿಂಗ್ ವಾಯೇಜ್, ಎ ಜರ್ನಿ ಟು ಎಕ್ಸಲೆನ್ಸ್ ಎಂಬ ರಾಷ್ಟ್ರೀಯ ಹೋಮಿಯೋಪತಿ ಸಮ್ಮೇಳನ-2024 ಅನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರೋಗ ತಡೆಗಟ್ಟುವಲ್ಲಿ ರೋಗನಿರೋಧಕ ಶಕ್ತಿಯು ಪ್ರಮುಖ ಪಾತ್ರವನ್ನು ವಹಿಸುತ್ತದೆ, ರೋಗವು ಭಾಧಿಸುವ ಸಂದರ್ಭದಲ್ಲಿ ವ್ಯಕ್ತಿಯ ಪ್ರತಿರಕ್ಷೆ ಕಾರ್ಯವು ಸುಪ್ತವಾಗಿರುವದರಿಂದ ರೋಗವು ತೀವ್ರವಾಗುತ್ತದೆ. ಹೋಮಿಯೋಪತಿ ಚಿಕಿತ್ಸೆಗಳು ವೈಯಕ್ತಿಕ ಅಗತ್ಯಗಳಿಗೆ ಅನುಗುಣವಾಗಿರುತ್ತದೆ. ಯಾವುದೇ ಅಡ್ಡಪರಿಣಾಮಗಳಿಲ್ಲದ ನೈಸರ್ಗಿಕವಾಗಿ ಗುಣಪಡಿಸುವ ಕಾರ್ಯವಿಧಾನಗಳನ್ನು ಪುನರುತ್ಪಾದಿಸುವಲ್ಲಿ ಹೋಮಿಯೋ ಔಷಧಿಗಳು ಬಹಳ ಸಹಕಾರಿ ಎಂದ ಅವರು, ಅತ್ಯಂತ ಸರಳ ವಿಧಾನಗಳನ್ನು ಒಳಗೊಂಡಿರುವ ಈ ಚಿಕಿತ್ಸೆಯು ಬಹಳ ಪ್ರಯೋಜನಕಾರಿ. ರೋಗಿಗಳಿಗೆ ಹೆಚ್ಚಿನ ಆದ್ಯತೆ ನೀಡುತ್ತ, ಸಹಾನುಭೂತಿಯೊಂದಿಗೆ ಚಿಕಿತ್ಸೆ ನೀಡಲು ಮತ್ತು ಆರೋಗ್ಯ ರಕ್ಷಣೆಗೆ ಅವಶ್ಯವಿರುವ ವಿಧಾನಗಳನ್ನು ಅನುಸರಿಸಬೇಕು.ವ್ಯಕ್ತಿಯಿಂದ ವ್ಯಕ್ತಿಗೆ ವಿಭಿನ್ನಾಗಿರುತ್ತದೆ. ಆದ್ದರಿಂದ ಅವರ ಅಗತ್ಯತೆ ಹಾಗೂ ಅವರ ಲಕ್ಷಣಗಳನ್ನು ಆಧರಿಸಿ ಚಿಕಿತ್ಸೆ ನೀಡಲಾಗುತ್ತದೆ. ಆದರೆ ಇಲ್ಲಿ ತಾಳ್ಮೆ ಅತ್ಯಂತ ಮುಖ್ಯವಾಗಿರುತ್ತದೆ ಎಂದರು.

ನವದೆಹಲಿಯ ರಾಷ್ಟ್ರೀಯ ಹೋಮಿಯೋಪತಿ ಆಯೋಗದ ಕಾರ್ಯದರ್ಶಿ ಡಾ. ಸಂಜಯ್ ಗುಪ್ತಾ ಅವರು, ವೈದ್ಯಕೀಯ ಶಿಕ್ಷಣದಲ್ಲಿ ಕೃತಕ ಬುದ್ಧಿಮತ್ತೆ ಮತ್ತು ಡೇಟಾ ಸೈನ್ಸ್‌ಗಳನ್ನು ಸಂಯೋಜಿಸಲು ಅಗತ್ಯವಿರುವ ಸಹಕಾರವನ್ನು ನೀಡಲಾಗುತ್ತದೆ. ನೂತನ ಶಿಕ್ಷಣ ನೀತಿಯನ್ನು ಅಳವಡಿಸಿಕೊಂಡು ಒಂದೇ ಸೂರಿನಡಿ ಹೊಮಿಯೊಪಥಿಗೆ ಅವಶ್ಯವಿರುವ ನೀತಿ ನಿರೂಪಣೆಯನ್ನು ಹಂತಹಂತವಾಗಿ ಜಾರಿಗೆ ತರಲಾಗುತ್ತದೆ. ಹೊಮಿಯೊಪತಿ ವೈದ್ಯರಿಗೂ ಕೂಡ ಅಗತ್ಯ ತರಬೇತಿ ನೀಡಲು ಕ್ರಮಕೈಗೊಳ್ಳಲಾಗುತ್ತದೆ ಎಂದು ಹೇಳಿದರು.

ಕೆಎಲ್ಇ ವಿಶ್ವವಿದ್ಯಾಲಯದ ಉಪಕುಲಪತಿ ಡಾ.ನಿತಿನ್ ಗಂಗಾನೆ ಅವರು ಮಾತಾನಡಿ, ಕೃತಕ ಬುದ್ಧಿಮತ್ತೆ ಮತ್ತು ಡಾಟಾ ಸೈನ್ಸ್ ಕೋರ್ಸ್‌ಗಳನ್ನು ಪರಿಚಯಿಸಲು ಉದ್ದೇಶಿಸಲಾಗಿದ್ದು, ಅನುಮೋದನೆಗಾಗಿ ಹೋಮಿಯೋಪತಿ ಕೌನ್ಸಿಲ್‌ಗೆ ಕಳುಹಿಸಿಕೊಡಲಾಗಿದೆ. ಗುಣಾತ್ಮಕ ಸಂಶೋಧನೆಗೆ ಆರ್ಥಿಕ ಸಹಾಯ ಹಾಗೂ ಅಗತ್ಯವಿರುವ ಸಹಕಾರವನ್ನು ನೀಡಲಾಗುತ್ತದೆ. ಆದರಿಂದ ಹೆಚ್ಚೆಚ್ಚು ಸಂಶೋಧನೆಗಳನ್ನು ಕೈಗೊಳ್ಳುವಂತೆ ಕರೆ ನೀಡಿದ ಅವರು, ಹೊಮಿಯೊಪತಿ ಜರ್ನಲ್ ವಿಷೇಶ ಸಂಚಿಕೆಯನ್ನು ಪ್ರಾರಂಭಿಸಲಾಗುತ್ತದೆ ಎಂದು ತಿಳಿಸಿದರು.

ಕರ್ನಾಟಕ ಕ್ವಾಲಿಫೈಡ್ ಹೋಮಿಯೋಪತಿ ಅಸೋಸಿಯೇಶನ್‌ನ ಅಧ್ಯಕ್ಷ ಡಾ.ಶ್ರೀಪಾದ್ ಹೆಗಡೆ ಅವರು ಮಾತನಾಡಿದರು. 41 ಸಂಶೋಧನಾ ಪ್ರಬಂಧಗಳನ್ನು ಮಂಡಿಸಲಾಯಿತು.ಸಮ್ಮೇಳನದಲ್ಲಿ 11 ರಾಜ್ಯಗಳ 950 ಕ್ಕೂ ಅಧಿಕ ಪ್ರತಿನಿಧಿಗಳನ್ನು ಭಾಗವಹಿಸಿದ್ದರು. ಕೆಎಲ್ಇ ಹೋಮಿಯೋಪತಿ ವೈದ್ಯಕೀಯ ಕಾಲೇಜಿನ ನಿರ್ದೇಶಕರಾದ ಡಾ.ಎಂ.ಎ.ಉಡಚನಕರ ಅವರು ಸ್ವಾಗತಿಸಿದರು. ಕೆಎಲ್ಇ ಹೋಮಿಯೋಪತಿ ಕಾಲೇಜಿನ ಪ್ರಾಚಾರ್ಯರಾದ ಡಾ ಸ್ವರೂಪ ಪಾಟೀಲ ಅವರು ವಂದಿಸಿದರು.ಸಮ್ಮೇಳನದಲ್ಲಿ ಡಾ. ನಾಯರ್ ಮತ್ತು ಡಾ. ಸಂಜಯ್ ಗುಪ್ತಾ ಅವರನ್ನು ಸನ್ಮಾನಿಸಲಾಯಿತು.

ಪ್ರೀ ವೆಡ್ಡಿಂಗ್ ಶೂಟ್; ಕೆಲಸ ಕಳೆದುಕೊಂಡ ಸರ್ಕಾರಿ ಆಸ್ಪತ್ರೆ ವೈದ್ಯ

ಚಿತ್ರದುರ್ಗ: ಪ್ರೀ ವೆಡ್ಡಿಂಗ್ ಶೂಟ್ ನಡೆಸುವುದಕ್ಕೆ ಸರ್ಕಾರಿ ಆಸ್ಪತ್ರೆಯ ಆಪರೇಶನ್ ಥಿಯೇಟರ್ ಬಳಸಿಕೊಂಡಿರುವ ವಿಡಿಯೋ ವೈರಲ್ ಆದ ಬಳಿಕ ಅದರಲ್ಲಿ ಭಾಗಿಯಾದ ಡಾಕ್ಟರ್ ಅನ್ನು ಆರೋಗ್ಯ ಇಲಾಖೆ ಕೆಲಸದಿಂದ ವಜಾಗೊಳಿಸಿದೆ. ಹೊಳಲ್ಕೆರೆ ಆಸ್ಪತ್ರೆಯಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಡಾ.ಅಭಿಷೇಕ್ ವಜಾಗೊಂಡಿರುವ ವೈದ್ಯ. ಭರಮಸಾಗರದ ಸಮುದಾಯ ಆರೋಗ್ಯ ಕೇಂದ್ರದ ಶಸ್ತ್ರಚಿಕಿತ್ಸಾ ಕೊಠಡಿಯನ್ನು ಪ್ರೀ ವೆಡ್ಡಿಂಗ್ ಶೂಟ್‌ಗೆ ಬಳಸಲಾಗಿತ್ತು. ಪ್ರೀ ವೆಡ್ಡಿಂಗ್ ಶೂಟ್ ಮೇಕಿಂಗ್ ವಿಡಿಯೋ ವೈರಲ್ ಆಗಿತ್ತು. ಈ ಶೂಟ್ ಬುಧವಾರ ನಡೆದಿತ್ತು ಎಂದು ಹೇಳಲಾಗುತ್ತಿದೆ. ಪ್ರೀ ವೆಡ್ಡಿಂಗ್ ಶೂಟ್‌ನಲ್ಲಿ ಡಾಕ್ಟರ್ ತನ್ನ ಭಾವಿ ಪತ್ನಿ (ಅವರೂ ಡಾಕ್ಟರ್) ಯ ಜೊತೆಗೆ ರೋಗಿಯ ಆಪರೇಶನ್ ಮಾಡುವ ದೃಶ್ಯ ಚಿತ್ರೀಕರಿಸಲು ಭರಮಸಾಗರದ ಸಮುದಾಯ ಆರೋಗ್ಯ ಕೇಂದ್ರದ ಶಸ್ತ್ರಚಿಕಿತ್ಸಾ ಕೊಠಡಿಯನ್ನು ಬಳಸಿದ್ದರು ಎಂಬುದು ಆರೋಪ.

ಕೆರೆಯಲ್ಲಿ ಸಿಲಿಕ್ಕಿಕೊಂಡ ಬಿಜೆಪಿ ಅಲೋಂಗ್: ಸಚಿವರನ್ನು ರಕ್ಷಿಸಲು ಜೆಸಿಬಿ ತರಸಿ ಎಂದ ನೆಟ್ಟಿಗರು

ನಾಗಲ್ಯಾಂಡ್ : ನಾಗಲ್ಯಾಂಡ್ ಸರ್ಕಾರದ ಸಚಿವ ಮತ್ತು ಬಿಜೆಪಿ ನಾಯಕ ತೆಮ್ಜೆನ್ ಇಮ್ನಾ ಅಲೋಂಗ್ ಮತ್ತೆ ಸುದ್ದಿಯಲ್ಲಿದ್ದಾರೆ. ತಮ್ಮ ದೈತ್ಯ ದೇಹದ ಮೂಲಕ ಸುದ್ದಿಯಾಗುವ ಸಚಿವರು ಇದೀಗ ಸೋಶಿಯಲ್ ಮೀಡಿಯಾದಲ್ಲಿ ವಿಡಿಯೋ ಒಂದನ್ನು ಹಂಚಿಕೊಂಡಿದ್ದು ಸಖತ್ ವೈರಲ್ ಆಗುತ್ತಿದೆ.

ಚಿಕ್ಕಮ್ಮನನ್ನೇ ಕೊಂದ ಕೊಲೆಗಾರ ಅರೆಸ್ಟ್

ಧಾರವಾಡ: ನಗರದಲ್ಲಿ ಕಳೆದೊಂದು ವಾರದಿಂದ ಐದು ಕೊಲೆಗಳು ನಡೆದು ಹೋಗಿವೆ. ಪ್ರತಿಯೊಂದು ಕೊಲೆಗೂ ಪ್ರತ್ಯೇಕ ಕಾರಣಗಳಿವೆ. ಈ ಐದೂ ಕೊಲೆಗಳಲ್ಲಿ ಗಮನ ಸೆಳೆದಿದ್ದು, ನವಲೂರು ಬಡಾವಣೆಯ ವೃದ್ಧೆಯ ಕೊಲೆ. ಏಕೆಂದರೆ ಒಂಟಿಯಾಗಿ ಜೀವನ ನಡೆಸುತ್ತಿದ್ದ ಅಜ್ಜಿಗೆ ಯಾರೂ ವೈರಿಗಳೇ ಇರಲಿಲ್ಲ. ಆಧ್ಯಾತ್ಮದತ್ತ ಮನಸ್ಸನ್ನು ವಾಲಿಸಿದ್ದ ಅಜ್ಜಿಯನ್ನು ಕೊಂದವರ ಮೇಲೆ ಇಡೀ ಧಾರವಾಡದ ಜನರೇ ಆಕ್ರೋಶಗೊಂಡಿದ್ದರು. ಇದೀಗ ಪೊಲೀಸರು ಕೊಲೆಗಾರನನ್ನು ಲಾಕ್ ಮಾಡಿದ್ದಾರೆ. ಆತಂಕಕಾರಿ ವಿಚಾರವೆಂದರೆ ಆತ ಆಕೆಗೆ ಮಗನೇ ಆಗಬೇಕು ಎನ್ನುವುದು.

ಧಾರವಾಡ ನಗರದ ನವಲೂರು ಬಡಾವಣೆಯ ಕರೆವ್ವ ಇರಬಗೇರಿ ಎನ್ನುವ 60 ವರ್ಷದ ವೃದ್ಧೆಯನ್ನು ಕೊಲೆ ಮಾಡಲಾಗಿತ್ತು. ಕರೆವ್ವ ಹಲವಾರು ವರ್ಷಗಳ ಹಿಂದೆಯೇ ಪತಿಯನ್ನು ಕಳೆದುಕೊಂಡಿದ್ದಳು.

ಇನ್ನು ಆಕೆಗಿದ್ದ ಇಬ್ಬರು ಪುತ್ರರು ಕೂಡ ಬೇರೆ ಬೇರೆ ಕಾರಣದಿಂದ ಮೃತಪಟ್ಟಿದ್ದರು. ಹೀಗಾಗಿ ಈಕೆ ಒಂಟಿಯಾಗಿ ಜೀವನ ನಡೆಸುತ್ತಿದ್ದಳು. ಆದರೆ, ಈಕೆಯ ಪತಿಯ ಸಹೋದರರೇ ಆಕೆಯ ಪಾಲಿನ ವಿಲನ್ಗಳಾಗಿದ್ದರು. ಏಕೆಂದರೆ ಪತಿಯಿಂದ ಈಕೆಗೆ ಬಂದಿದ್ದ ಜಮೀನು ಹಾಗೂ ಆಸ್ತಿಯೇ ಆಕೆಯ ಪಾಲಿಗೆ ಮುಳುವಾಗಿ ಹೋಗಿದೆ.

ಕರೆವ್ವಗೆ ದೇವರೆಂದರೆ ಸಾಕಷ್ಟು ಭಕ್ತಿ. ಇದೇ ಕಾರಣಕ್ಕೆ ಬೆಳ್ಳಂಬೆಳಿಗ್ಗೆ ಎದ್ದು ಎಲ್ಲ ದೇವಸ್ಥಾನಗಳಿಗೆ ಹೋಗಿ, ದರ್ಶನ ತೆಗೆದುಕೊಂಡು ಬರುವುದು ರೂಢಿ. ಇವತ್ತು ಕೂಡ ಅದೇ ರೀತಿ ಹೋದಾಕೆಯನ್ನು ಉಮೇಶ್ ಇರಬಗೇರಿ ಎನ್ನುವವ ರಾಡ್ನಿಂದ ಹೊಡೆದು ಕೊಂದು ಹಾಕಿದ್ದಾರೆ. ಈ ಉಮೇಶ್ ಬೇರೆ ಯಾರೂ ಅಲ್ಲ, ಕರೆವ್ವನ ಪತಿಯ ಅಣ್ಣನ ಮಗ. ಆತನೇ ಆಸ್ತಿಗಾಗಿ ಚಿಕ್ಕಮ್ಮನನ್ನೇ ಕೊಂದಿದ್ದಾನೆ. ಈ ಹಿನ್ನಲೆ ವಿದ್ಯಾಗಿರಿ ಠಾಣೆ ಪೊಲೀಸರು ಉಮೇಶನ್ನು ಬಂಧಿಸಿ ಜೈಲಿಗಟ್ಟಿದ್ದಾರೆ.

ಬಳ್ಳಾರಿ ಐತಿಹಾಸಿಕ ಬೆಟ್ಟ ಹತ್ತುವ ಮೂಲಕ ಸಂವಿಧಾನ ಜಾಗೃತಿ

ಬಳ್ಳಾರಿ: ಸಂವಿಧಾನದ ಮೌಲ್ಯ, ಆಶಯಗಳ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಎಲ್ಲರೂ ಕೈಜೋಡಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ಕರೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಸಂವಿಧಾನ ಅಂಗೀಕಾರಗೊಂಡು 75ನೇ ವರ್ಷ ಪ್ರಯುಕ್ತ 'ಸಂವಿಧಾನ ಜಾಗೃತಿ ಜಾಥಾ' ಅಂಗವಾಗಿ ಶುಕ್ರವಾರ ಹಮ್ಮಿಕೊಂಡಿದ್ದ ಐತಿಹಾಸಿಕ ಬಳ್ಳಾರಿ ಬೆಟ್ಟ ಹತ್ತುವ ಸಂವಿಧಾನ ನಡಿಗೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರು ರಚಿಸಿದ ನಮ್ಮ ಸಂವಿಧಾನ ಇಡೀ ಪ್ರಪಂಚದಲ್ಲಿಯೇ ಅತ್ಯಂತ ಶ್ರೇಷ್ಠ ಸಂವಿಧಾನವಾಗಿದೆ. ಈ ಸಂವಿಧಾನ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದರು.

ಸಂವಿಧಾನದ ತತ್ವಾದರ್ಶಗಳನ್ನು ಎತ್ತಿಹಿಡಿಯುವ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಸಂವಿಧಾನ ಕುರಿತ ಅರಿವು ಹೊಂದಬೇಕು. ಸಂವಿಧಾನ ಕುರಿತು ಜಾಗೃತಿ ಮೂಡಿಸಲು ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಇದರ ಸಲುವಾಗಿ ಅಧಿಕಾರಿಗಳು, ವಿದ್ಯಾರ್ಥಿಗಳೊಂದಿಗೆ ನಗರದ ಐತಿಹಾಸಿಕ ಪ್ರಸಿದ್ಧ ಏಕಶಿಲಾ ಬೆಟ್ಟ ಹತ್ತುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಎಲ್ಲರೂ ಸುರಕ್ಷಿತವಾಗಿ ಬೆಟ್ಟ ಹತ್ತಿ, ಇಳಿಯಬೇಕು ಎಂದರು.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್. ಎನ್ ಅವರು ಮಾತನಾಡಿ, ಸಂವಿಧಾನದ ಆಶಯಗಳನ್ನು ಎತ್ತಿಹಿಡಿಯುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಸಂವಿಧಾನ ಮೌಲ್ಯ ಮತ್ತು ಆದರ್ಶಗಳನ್ನು ರಾಜ್ಯ, ರಾಷ್ಟ್ರ ಮಟ್ಟಕ್ಕೆ ಪಸರಿಸುವ ಕಾರ್ಯವಾಗಬೇಕಿದೆ. ಇದಕ್ಕೆ ಎಲ್ಲರ ಸಹಕಾರ ಅತ್ಯಗತ್ಯವಾಗಿದೆ ಎಂದು ಹೇಳಿದರು.

ಫೆ. 25ರಂದು